**ಕರ್ನಾಟಕ ಸರ್ಕಾರ**

**ಕರ್ನಾಟಕ ಪರೀಕ್ಷಾ ಪ್ರಾಧಿಕಾರ**

**ಬೆಂಗಳೂರು**

**ಸಂಖ್ಯೆ: ಇಡಿ/ಕೆಇಎ/ಆಡಳಿತ/ಸಿ.ಆರ್.03/2023-24 (ಕೆಕೆ) ದಿನಾಂಕ: 24.02.2024**

**ಸಂಖ್ಯೆ: ಇಡಿ/ಕೆಇಎ/ಆಡಳಿತ/ಸಿ.ಆರ್.03/2023-24 (ಆರ್‌ಪಿಸಿ) ದಿನಾಂಕ: 24.02.2024**

ಬೆಂಗಳೂರು ಮಹಾನಗರ ಸಾರಿಗೆ ಸಂಸ್ಥೆಯಲ್ಲಿ ಖಾಲಿ ಇರುವ ನಿರ್ವಾಹಕ (ದರ್ಜೆ-3 ಮೇಲ್ವಿಚಾರಕೇತರ) ಹುದ್ದೆಗಳನ್ನು ಸಂಸ್ಥೆಯ (ಪದವೃಂದ ಮತ್ತು ನೇಮಕಾತಿ) ನಿಯಮಾವಳಿಗಳು 1982 ಮತ್ತು ತದನಂತರ ಹೊರಡಿಸಲಾಗಿರುವ ತಿದ್ದುಪಡಿಗಳ ಅನುಸಾರ **"ಮಿಕ್ಕುಳಿದ"** ಹಾಗೂ **"ಸ್ಥಳೀಯ"** ಈ ಎರಡೂ ವೃಂದಗಳಿಗೆ ಪ್ರತ್ಯೇಕವಾಗಿ ಮೀಸಲಿರುವ ಹುದ್ದೆಗಳನ್ನು ಅರ್ಹ ಅಭ್ಯರ್ಥಿಗಳಿಂದ ಭರ್ತಿ ಮಾಡಲು ಕರ್ನಾಟಕ ಪರೀಕ್ಷಾ ಪ್ರಾಧಿಕಾರದಿಂದ ಆನ್‌ಲೈನ್ (ON-LINE) ಮೂಲಕ ಅರ್ಜಿಗಳನ್ನು ಆಹ್ವಾನಿಸಿದೆ.

1. **ಮಿಕ್ಕುಳಿದ ವೃಂದ: 2286 ಹುದ್ದೆಗಳು**

**ಹುದ್ದೆಗಳ ವರ್ಗೀಕರಣ:**

(01ನೇ ಆವೃತ್ತದ 1ನೇ ಬಿಂದುವಿನಿಂದ 22ನೇ ವೃತ್ತದ 86 ನೇ ಬಿಂದುವಿನವರೆಗೆ)

| ಮೀಸಲಾತಿ ವರ್ಗ | ಸಾಮಾನ್ಯ | ಮಹಿಳಾ ಮೀಸಲು | ಮಾಜಿ ಸೈನಿಕರು | ಯೋಜನಾ ನಿರಾಶ್ರಿತರು | ಗ್ರಾಮೀಣ ಮೀಸಲು | ಕನ್ನಡ ಮಾಧ್ಯಮ | ತೃತೀಯ ಲಿಂಗ | ಒಟ್ಟು |
|---|---|---|---|---|---|---|---|---|
| ಪ.ಜಾ | 83 | 128 | 38 | 19 | 97 | 19 | 4 | **388** |
| ಪ.ಪಂ | 34 | 53 | 16 | 8 | 40 | 8 | 2 | **161** |
| ಪ್ರ-1 | 20 | 31 | 9 | 4 | 23 | 4 | 1 | **92** |
| 2ಎ | 72 | 113 | 34 | 17 | 86 | 17 | 4 | **343** |
| 2ಬಿ | 20 | 30 | 9 | 4 | 23 | 4 | 1 | **91** |
| 3ಎ | 20 | 30 | 9 | 4 | 23 | 4 | 1 | **91** |
| 3ಬಿ | 24 | 38 | 11 | 5 | 29 | 6 | 1 | **114** |
| ಸಾ.ವ | 212 | 332 | 100 | 50 | 252 | 50 | 10 | **1006** |
| **ಒಟ್ಟು** | **485** | **755** | **226** | **111** | **573** | **112** | **24** | **2286** |

2. **ಸ್ಥಳೀಯ ವೃಂದ-199 ಹುದ್ದೆಗಳು ಹಾಗೂ ಹಿಂಬಾಕಿ ಹುದ್ದೆಗಳು-15:(ಒಟ್ಟು 214)**

**ಹುದ್ದೆಗಳ ವರ್ಗೀಕರಣ:**

(01 ನೇ ಆವೃತ್ತದ 1ನೇ ಬಿಂದುವಿನಿಂದ 2ನೇ ಆವೃತ್ತದ 99 ನೇ ಬಿಂದುವಿನವರೆಗೆ)

| ಮೀಸಲಾತಿ ವರ್ಗ | ಸಾಮಾನ್ಯ | ಮಹಿಳಾ ಮೀಸಲು | ಮಾಜಿ ಸೈನಿಕರು | ಯೋಜನಾ ನಿರಾಶ್ರಿತರು | ಗ್ರಾಮೀಣ ಮೀಸಲು | ಕನ್ನಡ ಮಾಧ್ಯಮ | ತೃತೀಯ ಲಿಂಗ | ಒಟ್ಟು |
|---|---|---|---|---|---|---|---|---|
| ಪ.ಜಾ | 7 | 11 | 3 | 1 | 9 | 2 | 1 | **34** |
| ಪ.ಪಂ | 3 | 5 | 1 | 0 | 4 | 1 | 0 | **14** |
| ಪ್ರ-1 | 3 | 3 | 0 | 0 | 2 | 0 | 0 | **8** |
| 2ಎ | 6 | 10 | 3 | 1 | 8 | 1 | 1 | **30** |
| 2ಬಿ | 3 | 3 | 0 | 0 | 2 | 0 | 0 | **8** |
| 3ಎ (ಸಾಮಾನ್ಯ) | 3 | 3 | 0 | 0 | 2 | 0 | 0 | **8** |
| 3ಎ (ಹಿಂಬಾಕಿ) | 3 | 4 | 2 | 1 | 4 | 1 | 0 | **15** |
| 3ಬಿ | 3 | 3 | 1 | 0 | 3 | 0 | 0 | **10** |
| ಸಾ.ವ | 20 | 28 | 8 | 4 | 22 | 4 | 1 | **87** |
| **ಒಟ್ಟು** | **51** | **70** | **18** | **7** | **56** | **9** | **3** | **214** |

❖ ***ಮೇಲ್ಕಂಡ ಹುದ್ದೆಗಳ ಸಂಖ್ಯೆಯು ತಾತ್ಕಾಲಿಕವಾಗಿದ್ದು, ಅವಶ್ಯಕತೆಗೆ ಅನುಗುಣವಾಗಿ ಮಾರ್ಪಡಿಸಬಹುದಾಗಿದೆ.***

❖ ***ಸಮತಲ ಮೀಸಲು ಸ್ಥಾನಗಳಿಗೆ ಅರ್ಹ ಅಭ್ಯರ್ಥಿಗಳು ಲಭ್ಯವಾಗದಿದ್ದಲ್ಲಿ ಅಂತಹ ಸ್ಥಾನಗಳನ್ನು ಆಯಾ ವರ್ಗಕ್ಕೆ ಸೇರಿದ ಸಾಮಾನ್ಯ ಅಭ್ಯರ್ಥಿಗಳಿಂದ ಭರ್ತಿ ಮಾಡಲಾಗುವುದು.***

**ಕಲ್ಯಾಣ-ಕರ್ನಾಟಕ ಪ್ರದೇಶದ ಸ್ಥಳೀಯ ವ್ಯಕ್ತಿಗಳಿಗೆ ಸೂಚನೆಗಳು:**

1. ಸ್ಥಳೀಯ ವೃಂದದ ಹುದ್ದೆಗಳಿಗೆ ಕಲ್ಯಾಣ-ಕರ್ನಾಟಕ ಪ್ರದೇಶದ ಸ್ಥಳೀಯ ವ್ಯಕ್ತಿಗಳು ಮಾತ್ರ ಅರ್ಜಿ ಸಲ್ಲಿಸಲು ಅರ್ಹರಿರುತ್ತಾರೆ.
2. ಕಲ್ಯಾಣ-ಕರ್ನಾಟಕ ಪ್ರದೇಶದ ಸ್ಥಳೀಯ ವ್ಯಕ್ತಿಗಳು, ಸ್ಥಳೀಯ ಹಾಗೂ ಮಿಕ್ಕುಳಿದ ಎರಡೂ ವೃಂದದ ಹುದ್ದೆಗಳಿಗೆ ಅರ್ಜಿ ಸಲ್ಲಿಸಲು ಅವಕಾಶವಿರುತ್ತದೆ.
3. ಕಲ್ಯಾಣ-ಕರ್ನಾಟಕ ಸ್ಥಳೀಯ ವೃಂದ ಅಥವಾ ಮಿಕ್ಕುಳಿದ ವೃಂದದ ಹುದ್ದೆಗಳಿಗೆ ಅರ್ಜಿ ಸಲ್ಲಿಸಲು ಬಯಸಿದಲ್ಲಿ ಅರ್ಜಿಯಲ್ಲಿ ಯಾವ ವೃಂದದ ಹುದ್ದೆಗೆ ಅರ್ಜಿ ಸಲ್ಲಿಸಲಾಗಿದೆ ಎಂಬುದನ್ನು ಸ್ಪಷ್ಟವಾಗಿ ನಮೂದಿಸತಕ್ಕದ್ದು.
4. ಸ್ಥಳೀಯ ಹಾಗೂ ಮಿಕ್ಕುಳಿದ ಈ ಎರಡೂ ವೃಂದಗಳಿಗೆ ಅರ್ಜಿ ಸಲ್ಲಿಸಲು ಬಯಸಿದಲ್ಲಿ ಅರ್ಜಿಯಲ್ಲಿ ಸ್ಪಷ್ಟವಾಗಿ ನಮೂದಿಸತಕ್ಕದ್ದು.
5. ಸ್ಥಳೀಯ ವೃಂದ ಹಾಗೂ ಮಿಕ್ಕುಳಿದ ಎರಡೂ ವೃಂದಗಳಲ್ಲಿ ಆಯ್ಕೆಗೆ ಅರ್ಹತೆ ಹೊಂದಿದಲ್ಲಿ ಯಾವ ವೃಂದದ ಹುದ್ದೆಗೆ ಆಯ್ಕೆ ಬಯಸುತ್ತೀರಿ ಎಂಬ ಬಗ್ಗೆ ಸ್ಪಷ್ಟವಾಗಿ ನಮೂದಿಸತಕ್ಕದ್ದು.
6. ಒಂದು ವೇಳೆ ಸ್ಥಳೀಯ ಅಭ್ಯರ್ಥಿಯು ಪ್ರಸ್ತುತ ನೇಮಕಾತಿಗೆ ಸಂಬಂಧಸಿದಂತೆ ಮಿಕ್ಕುಳಿದ ವೃಂದದ ಹುದ್ದೆಯನ್ನು ಆಯ್ಕೆ ಮಾಡಿಕೊಂಡು ನೇಮಕಾತಿ ಹೊಂದಿದಲ್ಲಿ ಅಂತಹ ಅಭ್ಯರ್ಥಿಯು ಜಾರಿಯಲ್ಲಿರುವ ನಿಯಮದಂತೆ ತನ್ನ ಸೇವಾವಧಿಯಲ್ಲಿ ಅನುಚ್ಛೇದ-371(ಜೆ) ಮೀಸಲಾತಿ ಸೌಲಭ್ಯಗಳನ್ನು ಪಡೆಯಲು ಅವಕಾಶವಿರುವುದಿಲ್ಲ ಎಂಬುದನ್ನು ಸ್ಪಷ್ಟೀಕರಿಸಲಾಗಿದೆ.
7. ಕಲ್ಯಾಣ-ಕರ್ನಾಟಕ ಅಭ್ಯರ್ಥಿಗಳು ಸ್ಥಳೀಯ ಹಾಗೂ ಮಿಕ್ಕುಳಿದ ವೃಂದದ ಹುದ್ದೆಗಳಿಗೆ ಅರ್ಜಿ ಸಲ್ಲಿಸಿದಲ್ಲಿ ಈ ಎರಡೂ ವೃಂದಗಳಿಗೆ ಅರ್ಜಿ ಸಲ್ಲಿಸಿದ ಅಭ್ಯರ್ಥಿಗಳಿಗೆ ಒಂದೇ ಸಾಮಾನ್ಯ ಸಾಮರ್ಥ್ಯ ಪರೀಕ್ಷೆ (Common Aptitude Test-CAT) ಅನ್ನು ನಡೆಸಲಾಗುವುದು ಹಾಗೂ ಸದರಿ ಪರೀಕ್ಷೆಯಲ್ಲಿ ಗಳಿಸುವ ಅಂಕಗಳನ್ನೇ ಮಿಕ್ಕುಳಿದ ಹಾಗೂ ಸ್ಥಳೀಯ ವೃಂದದ ಹುದ್ದೆಗಳ ಆಯ್ಕೆ ಪ್ರಕ್ರಿಯೆಗೆ ಪರಿಗಣಿಸಲಾಗುವುದು. ಮಿಕ್ಕುಳಿದ ವೃಂದ ಹಾಗೂ ಸ್ಥಳೀಯ ವೃಂದದ ಹುದ್ದೆಗಳಿಗೆ ಪ್ರತ್ಯೇಕ ಸಾಮಾನ್ಯ ಸಾಮರ್ಥ್ಯ ಪರೀಕ್ಷೆಯನ್ನು ನಡೆಸಲಾಗುವುದಿಲ್ಲ.

**೩. <u>ಶೈಕ್ಷಣಿಕ ವಿದ್ಯಾರ್ಹತೆ:</u>**

| | |
|---|---|
| (ಅ) | ಪಿ.ಯು.ಸಿ (ಆರ್ಟ್ಸ್/ ಕಾಮರ್ಸ್ / ಸೈನ್ಸ್)ನಲ್ಲಿ ಉತ್ತೀರ್ಣರಾಗಿರತಕ್ಕದ್ದು,<br>ಅಥವಾ<br>10+2 ಐ.ಸಿ.ಎಸ್.ಇ, (ICSE)/ ಸಿ.ಬಿ.ಎಸ್.ಇ (CBSE)ರಲ್ಲಿ ಉತ್ತೀರ್ಣರಾಗಿರತಕ್ಕದ್ದು,<br>ಅಥವಾ<br>ತತ್ಸಮಾನ ವಿದ್ಯಾರ್ಹತೆ ಅಂದರೆ, ತಾಂತ್ರಿಕ ಶಿಕ್ಷಣ ಇಲಾಖೆಯಿಂದ 03 ವರ್ಷಗಳ ಡಿಪ್ಲೋಮಾದಲ್ಲಿ ಉತ್ತೀರ್ಣರಾಗಿರತಕ್ಕದ್ದು.<br>**(ಮುಕ್ತ ಶಾಲೆ ಅಥವಾ ಮುಕ್ತ ವಿಶ್ವವಿದ್ಯಾಲಯದಿಂದ ಪಡೆದ ಪಿ.ಯು.ಸಿ/12ನೇ ತರಗತಿಯನ್ನು ಅಥವಾ ಜೆ.ಓ.ಸಿ/ಜೆ.ಎಲ್.ಸಿ ಕೋರ್ಸ್‌ಗಳನ್ನು ಹೊರತುಪಡಿಸಿ)** |
| (ಆ) | ಮಾನ್ಯತೆ ಹೊಂದಿರುವ ಮೋಟಾರು ವಾಹನ ನಿರ್ವಾಹಕ ಪರವಾನಗಿ ಮತ್ತು ಬ್ಯಾಡ್ಜ್‌ಅನ್ನು ಹೊಂದಿರತಕ್ಕದ್ದು. |

**4) ದೇಹದಾರ್ಢ್ಯತೆ:**

| | ಪುರುಷ | ಮಹಿಳೆ |
|---|---|---|
| ಎತ್ತರ | 160 ಸೆಂ.ಮೀ | 150 ಸೆಂ.ಮೀ |

**5) ವಯೋಮಿತಿ :**

5.1) ಅರ್ಜಿಗಳನ್ನು ಸ್ವೀಕರಿಸಲು ನಿಗದಿಪಡಿಸಿದ ಕೊನೆಯ ದಿನಾಂಕ: 10.04.2024 ರಂದು ಈ ಕೆಳಕಂಡಂತೆ ಕನಿಷ್ಠ ವಯೋಮಿತಿ ಹೊಂದಿರಬೇಕು ಮತ್ತು ಗರಿಷ್ಠ ವಯೋಮಿತಿಯನ್ನು ಮೀರಿರಬಾರದು:

| ವರ್ಗ | ಕನಿಷ್ಠ ವಯೋಮಿತಿ | ಗರಿಷ್ಠ ವಯೋಮಿತಿ |
|---|---|---|
| **ಸಾಮಾನ್ಯ ವರ್ಗ** | **18 ವರ್ಷಗಳು** | **35 ವರ್ಷಗಳು** |
| **2ಎ/2ಬಿ/3ಎ/3ಬಿ** | **18 ವರ್ಷಗಳು** | **38 ವರ್ಷಗಳು** |
| **ಪ.ಜಾ/ಪ.ಪಂ/ ಪ್ರವರ್ಗ-1** | **18 ವರ್ಷಗಳು** | **40 ವರ್ಷಗಳು** |
| **ಮಾಜಿ ಸೈನಿಕ/ಇಲಾಖಾ ಅಭ್ಯರ್ಥಿ** | **-** | **45 ವರ್ಷಗಳು** |

5.2) ಸಂಸ್ಥೆಯ (ಪದವೃಂದ ಮತ್ತು ನೇಮಕಾತಿ) ನಿಯಮಾವಳಿಗಳನ್ವಯ ಕರ್ನಾಟಕ ರಾಜ್ಯದ ರಸ್ತೆ ಸಾರಿಗೆ ಸಂಸ್ಥೆಗಳ ಇಲಾಖಾ ಅಭ್ಯರ್ಥಿಗಳು ಅವರು ಸಲ್ಲಿಸಿದ ಸೇವಾ ವರ್ಷಗಳಿಗೆ ಅನುಗುಣವಾಗಿ ಗರಿಷ್ಟ 10 ವರ್ಷಗಳಿಗೆ ಮೀರದಂತೆ ವಯೋಮಿತಿ ರಿಯಾಯಿತಿಗೆ ಅರ್ಹರಾಗಿರುತ್ತಾರೆ. ಆದರೆ ಅವರ ವಯಸ್ಸು 45 ವರ್ಷ ಮೀರಿರಬಾರದು.

5.3) ಮಾಜಿ ಸೈನಿಕ ಅಭ್ಯರ್ಥಿಯು ಭಾರತದ ಸಶಸ್ತ್ರ ಪಡೆಯಲ್ಲಿ ಸಲ್ಲಿಸಿದ ಸೇವೆಯ ಜೊತೆಗೆ 3 ವರ್ಷಗಳ ವಯೋಮಿತಿಯ ರಿಯಾಯಿತಿಗೆ ಅರ್ಹರು, ಆದರೆ ಅವರ ವಯಸ್ಸು 45 ವರ್ಷ ಮೀರಿರಬಾರದು.

**6. ತರಬೇತಿ ಅವಧಿ ಭತ್ಯೆ ಮತ್ತು ವೇತನ ಶ್ರೇಣಿ:**

6.1) ನಿರ್ವಾಹಕ ಹುದ್ದೆಗಳಿಗೆ ಆಯ್ಕೆಯಾದ ಅಭ್ಯರ್ಥಿಗಳನ್ನು ಒಂದು ವರ್ಷ ಕಾಲ ವೃತ್ತಿ ತರಬೇತಿ **(On the Job Trainee)** ಯಾಗಿ ನಿಯೋಜಿಸಲಾಗುವುದು. ಈ ತರಬೇತಿ ಅವಧಿಯಲ್ಲಿ ಮಾಸಿಕ ಸಮಗ್ರ ತರಬೇತಿ ಭತ್ಯೆಯಾಗಿ **9,100-00** ನ್ನು ನೀಡಲಾಗುವುದು.

6.2) ಆಯ್ಕೆಗೊಂಡ ಅಭ್ಯರ್ಥಿಗಳು ಒಂದು ವರ್ಷದ ವೃತ್ತಿ ತರಬೇತಿಯನ್ನು ತೃಪ್ತಿಕರವಾಗಿ ಪೂರೈಸಿದಲ್ಲಿ, ಅವರನ್ನು ನಿಯಮಾನುಸಾರ ಎರಡು ವರ್ಷಗಳ ಅವಧಿಗೆ ಖಾಯಂ ಪೂರ್ವ ಪರೀಕ್ಷಾರ್ಥ ಸೇವೆಯಲ್ಲಿ ನೇಮಕಗೊಳಿಸಿ, ಈ ಕೆಳಕಾಣಿಸಿದಂತೆ ಕಾಲಿಕ ವೇತನ ಶ್ರೇಣಿಯನ್ನು ನಿಗದಿಪಡಿಸಲಾಗಿದೆ.

| ಕ್ರಸಂ | ಹುದ್ದೆ | ವೇತನ ಶ್ರೇಣಿ |
|---|---|---|
| 1 | ನಿರ್ವಾಹಕ | 18660-230-19120-280-20240-410-22700-520-25300 |

6.3) ಎರಡು ವರ್ಷಗಳ ಖಾಯಂ ಪೂರ್ವ ಪರೀಕ್ಷಾರ್ಥ ಸೇವೆಯನ್ನು ತೃಪ್ತಿಕರವಾಗಿ ಪೂರೈಸಿದಲ್ಲಿ ಅಂತಹವರನ್ನು ಸದರಿ ಹುದ್ದೆಯ ಸೇವೆಯಲ್ಲಿ ನೇಮಕಾತಿ ಪ್ರಾಧಿಕಾರದಿಂದ ಖಾಯಂಗೊಳಿಸಲಾಗುವುದು.

**7. ಅರ್ಜಿ ಸಲ್ಲಿಸುವ ವಿಧಾನ:**

7.1) ಕರ್ನಾಟಕ ಪರೀಕ್ಷಾ ಪ್ರಾಧಿಕಾರದ ವೆಬ್‌ಸೈಟ್ http://kea.kar.nic.in ನಲ್ಲಿ ತೋರಿಸುವ ಲಿಂಕ್ ಅನ್ನು ಆಯ್ಕೆ ಮಾಡಿ ಆನ್‌ಲೈನ್ ಮುಖಾಂತರ ಅರ್ಜಿಯನ್ನು ಭರ್ತಿ ಮಾಡಬೇಕು.

7.2) ಅಭ್ಯರ್ಥಿಗಳು (ON-LINE) ಆನ್‌ಲೈನ್ ಮೂಲಕ ಒಂದು ಬಾರಿ ಮಾತ್ರ ಅರ್ಜಿಯನ್ನು ಸಲ್ಲಿಸಲು ಅವಕಾಶವಿದ್ದು, ಅಭ್ಯರ್ಥಿಗಳು ಅರ್ಜಿಯನ್ನು ಭರ್ತಿ ಮಾಡುವ ಮೊದಲು ಎಲ್ಲಾ ವಿವರಗಳನ್ನು ಓದಿ ಅರ್ಥೈಸಿಕೊಂಡು ಆನಂತರವೇ ಆಯಾ ಅಭ್ಯರ್ಥಿಗಳಿಗೆ ಅನ್ವಯವಾಗುವ ವಿವರಗಳನ್ನು ಭರ್ತಿಮಾಡತಕ್ಕದ್ದು.

7.3) ಅಭ್ಯರ್ಥಿಯ ಇತ್ತೀಚಿನ ಪಾಸ್‌ಪೋರ್ಟ್ ಅಳತೆಯ ಭಾವಚಿತ್ರವನ್ನು ಹಾಗೂ ಕಪ್ಪು ಶಾಹಿಯ ಸ್ಕೆಚ್/ಮಾರ್ಕರ್ ಪೆನ್‌ನಲ್ಲಿ ಸಹಿಯನ್ನು ನಿಗದಿಪಡಿಸಿದ ಅಳತೆಯಲ್ಲಿ ಸ್ಕ್ಯಾನ್ ಮಾಡಿ ಅರ್ಜಿಗೆ UPLOAD ಮಾಡಬೇಕು.

7.4) ಒಮ್ಮೆ ಅರ್ಜಿ ಸಲ್ಲಿಸಿದ ನಂತರ ಅರ್ಜಿಯಲ್ಲಿನ ವಿವರಗಳನ್ನು / ಮೀಸಲಾತಿಗಳನ್ನು, ತಿದ್ದುಪಡಿ / ಸೇರ್ಪಡೆ ಮಾಡುವಂತೆ ನೀಡುವ ಯಾವುದೇ ಪ್ರತ್ಯೇಕ ಮನವಿಗಳನ್ನು ಪರಿಗಣಿಸಲಾಗುವುದಿಲ್ಲ.

7.5) ನಿಯಮಾನುಸಾರ ಆನ್‌ಲೈನ್ ಅರ್ಜಿಯಲ್ಲಿ ನಮೂದಿಸಲಾದ ಮಾಹಿತಿ ಆಧಾರದ ಮೇಲೆ ಮಾತ್ರವೇ ದಾಖಲೆಗಳ ಪರಿಶೀಲನೆ ಮಾಡಲಾಗುವುದರಿಂದ ವಯೋಮಿತಿ, ವಿದ್ಯಾರ್ಹತೆ, ಮೀಸಲಾತಿ ಪ್ರಮಾಣ ಪತ್ರ (ಮೀಸಲಾತಿ ಬಯಸಿದಲ್ಲಿ) ಹಾಗೂ ಇತರೆ ಪ್ರಮಾಣ ಪತ್ರಗಳನ್ನು ಅರ್ಜಿ ಸಲ್ಲಿಸಲು ನಿಗದಿಪಡಿಸಿರುವ ಕೊನೆಯ ದಿನಾಂಕದಂದು ಚಾಲ್ತಿಯಲ್ಲಿರುವಂತೆ ಅಧಿಸೂಚನೆಯ ಅನುಬಂಧದಲ್ಲಿ ಸೂಚಿಸಿರುವ ನಮೂನೆಯಂತೆ ಪಡೆದಿರತಕ್ಕದ್ದು. ತಪ್ಪಿದ್ದಲ್ಲಿ ಅವರ ಮೀಸಲಾತಿ/ಅಭ್ಯರ್ಥಿತನವನ್ನು ತಿರಸ್ಕರಿಸಲಾಗುವುದು.

7.6) ಅರ್ಜಿ ಸಲ್ಲಿಸಲು ನಿಗದಿಪಡಿಸಿರುವ ಕೊನೆಯ ದಿನಾಂಕ ಮತ್ತು ಸಮಯದ ನಂತರ ಬರುವ ಅರ್ಜಿಗಳನ್ನು ತಿರಸ್ಕರಿಸಲಾಗುವುದು.

7.7) ಫೋಟೋ ಮತ್ತು ಸಹಿಯನ್ನು ಅಪ್ಲೋಡ್ ಮಾಡದೇ ಇರುವ ಹಾಗೂ ಅರ್ಜಿ ಶುಲ್ಕ ಸಂದಾಯ ಮಾಡದ ಅಥವಾ ಭಾಗಶಃ ಅರ್ಜಿ ಶುಲ್ಕ ಸಂದಾಯ ಮಾಡಿರುವ ಅಭ್ಯರ್ಥಿಗಳ ಅರ್ಜಿಗಳನ್ನು ತಿರಸ್ಕರಿಸಲಾಗುವುದು.

7.8) ಅಭ್ಯರ್ಥಿಗಳು ಭರ್ತಿ ಮಾಡಿ ಸಲ್ಲಿಸಿದ ಅರ್ಜಿಯ ಒಂದು ಪ್ರತಿಯನ್ನು ತಮ್ಮ ಮಾಹಿತಿಗಾಗಿ ಕಡ್ಡಾಯವಾಗಿ ತಮ್ಮೊಂದಿಗೆ ಇಟ್ಟುಕೊಳ್ಳಲು ಸೂಚಿಸಿದೆ. ಸಂಸ್ಥೆಯಿಂದ ಯಾವುದೇ ಕಾರಣಕ್ಕೂ ಅರ್ಜಿಯ ಪ್ರತಿಯನ್ನು ಒದಗಿಸಲಾಗುವುದಿಲ್ಲ.

7.9) **ಅರ್ಜಿ ಸಲ್ಲಿಸಲು ನಿಗಧಿಪಡಿಸಿರುವ ಅವಧಿ:**

| | |
|---|---|
| **ಆನ್‌ಲೈನ್ ಮುಖಾಂತರ ಅರ್ಜಿ ಸಲ್ಲಿಸಲು ಪ್ರಾರಂಭಿಕ ದಿನಾಂಕ** | 10.03.2024 |
| **ಆನ್‌ಲೈನ್ ಮುಖಾಂತರ ಅರ್ಜಿ ಸಲ್ಲಿಸಲು ಕೊನೆಯ ದಿನಾಂಕ** | 10.04.2024 |
| **ಶುಲ್ಕ ಪಾವತಿ ಮಾಡಲು ಕೊನೆಯ ದಿನಾಂಕ** | 13.04.2024 |

7.10) ಅಭ್ಯರ್ಥಿಗಳು ಆನ್‌ಲೈನ್ ಮುಖಾಂತರ ಭರ್ತಿ ಮಾಡುವ ಮೊದಲು ಅರ್ಹತೆಗೆ ಸಂಬಂಧಿಸಿದ ಎಲ್ಲಾ ಸೂಚನೆಗಳನ್ನು ಓದಿಕೊಳ್ಳತಕ್ಕದ್ದು ಹಾಗೂ ನೀಡಿರುವ ಸೂಚನೆಗಳನ್ವಯ ಅರ್ಜಿಯನ್ನು ಭರ್ತಿ ಮಾಡತಕ್ಕದ್ದು.

8. **ಅರ್ಜಿ ಶುಲ್ಕ:**

| ಕ್ರ.ಸಂ | ವಿವರಗಳು | ಶುಲ್ಕ | |
|---|---|---|---|
| 1 | ಸಾಮಾನ್ಯ ಅರ್ಹತೆ ಮತ್ತು ಇತರೆ ಪ್ರವರ್ಗಗಳು (ಪ್ರವರ್ಗ-2ಎ / 2ಬಿ / 3ಎ / 3ಬಿ) | ರೂ. 750/- | ಪಾವತಿಸಿದ ಶುಲ್ಕವನ್ನು ಹಿಂದಿರುಗಿಸಲಾಗುವುದಿಲ್ಲ |
| 2 | ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ, ಪ್ರವರ್ಗ-1, ಮಾಜಿ ಸೈನಿಕ ಮತ್ತು ಅಂಗವಿಕಲ ಅಭ್ಯರ್ಥಿಗಳಿಗೆ. | ರೂ. 500/- | |

8.1) ಅರ್ಜಿ ಶುಲ್ಕವನ್ನು ಆನ್‌ಲೈನ್ ಮೂಲಕ ಪಾವತಿಸತಕ್ಕದ್ದು. ಇತರೆ ಪರೀಕ್ಷೆ ಅಥವಾ ನೇಮಕಾತಿಗಳಿಗೆ ಈಗಾಗಲೇ ಪಾವತಿಸಿರುವ ಅರ್ಜಿ ಶುಲ್ಕವನ್ನು ಪ್ರಸ್ತುತ ನೇಮಕಾತಿಗೆ ಹೊಂದಿಸಿಕೊಳ್ಳಲಾಗುವುದಿಲ್ಲ. ನಿಗಧಿತ ಅರ್ಜಿ ಶುಲ್ಕವನ್ನು ಸಂದಾಯ ಮಾಡದಿದ್ದಲ್ಲಿ ಅಂತಹ ಅರ್ಜಿಗಳನ್ನು ತಿರಸ್ಕರಿಸಲಾಗುವುದು.

8.2) ಶುಲ್ಕ ಪಾವತಿಸಲು ಕೊನೆಯ ದಿನಾಂಕವು ಸಾರ್ವತ್ರಿಕ ರಜಾ ದಿನವಾಗಿ ಘೋಷಿಸಲ್ಪಟ್ಟರೆ ಆ ದಿನಾಂಕದ ಮಾರನೆಯ ಕೆಲಸದ ದಿನವು ಕೊನೆಯ ದಿನಾಂಕವಾಗುವುದು.

**9. ಆಯ್ಕೆ ವಿಧಾನ: –**

9.1) ಹಿಂಬಾಕಿ ಹುದ್ದೆಗಳಿಗೆ ಪ್ರತ್ಯೇಕವಾಗಿ ಅರ್ಜಿಗಳನ್ನು ಆಹ್ವಾನಿಸದೇ ಇರುವ ಕಾರಣ ಸ್ಥಳೀಯ ವೃಂದದಡಿ ಅರ್ಜಿ ಸಲ್ಲಿಸುವ ಪ್ರವರ್ಗ 3(ಎ) ಕ್ಕೆ ಸೇರಿದ ಅರ್ಹ ಅಭ್ಯರ್ಥಿಗಳಿಂದ ಹಿಂಬಾಕಿ ಹುದ್ದೆಗಳನ್ನು ಭರ್ತಿ ಮಾಡಲಾಗುವುದು. ಹಿಂಬಾಕಿ ಹುದ್ದೆಗಳ ಭರ್ತಿಗಾಗಿ ಪ್ರತ್ಯೇಕ ಆಯ್ಕೆ ವಿಧಾನವನ್ನು ಅನುಸರಿಸಲಾಗುವುದಿಲ್ಲ.

9.2) **ಸಾಮಾನ್ಯ ಸಾಮರ್ಥ್ಯ ಪರೀಕ್ಷೆ (Commong Aptitude Test) ನಲ್ಲಿ ಕನಿಷ್ಠ ಶೇಕಡ 30 ರಷ್ಟು ಅಂಕಗಳನ್ನು ಪಡೆದ ಅಭ್ಯರ್ಥಿಗಳನ್ನು ಮಾತ್ರ ಆಯ್ಕೆ ಪರಿಶೀಲನೆಗೆ ಅರ್ಹರೆಂದು ಪರಿಗಣಿಸಲಾಗುವುದು**.

9.3) ಸಾಮಾನ್ಯ ಸಾಮರ್ಥ್ಯ ಪರೀಕ್ಷೆ (Commong Aptitude Test) ನಲ್ಲಿ ಗಳಿಸಿದ ಅಂಕಗಳಲ್ಲಿ ಶೇಕಡ 75 ರಷ್ಟು ಅಂಕಗಳನ್ನು ಹಾಗೂ ಸದರಿ ಹುದ್ದೆಗೆ ನಿಗದಿಪಡಿಸಿರುವ ಶೈಕ್ಷಣಿಕ ವಿದ್ಯಾರ್ಹತೆಯಲ್ಲಿ ಗಳಿಸಿರುವ ಅಂಕಗಳಲ್ಲಿ ಶೇಕಡ 25 ರಷ್ಟು ಅಂಕಗಳನ್ನು ಸೇರಿಸಿ ಮೆರಿಟ್ ಆಧಾರದ ಮೇಲೆ ಚಾಲ್ತಿಯಲ್ಲಿರುವ ಮೀಸಲಾತಿ ನಿಯಮಗಳ ಅನುಸಾರ 1:5 ರ ಅನುಪಾತದಲ್ಲಿ ಅಭ್ಯರ್ಥಿಗಳನ್ನು ಮೂಲ ದಾಖಲಾತಿಗಳ ಪರಿಶೀಲನೆ ಹಾಗೂ ದೇಹದಾರ್ಢ್ಯತೆ ಪರಿಶೀಲನೆಗೆ ಕರೆಯಲಾಗುವುದು.

9.4) 1:5 ರ ಅರ್ಹತಾ ಪಟ್ಟಿಯಲ್ಲಿ ಸ್ಥಾನ ಪಡೆದ ಅರ್ಹ ಅಭ್ಯರ್ಥಿಗಳು ಕರೆಪತ್ರವನ್ನು ವೆಬ್‌ಸೈಟ್‌ನಿಂದ ಮುದ್ರಿಸಿಕೊಂಡು ಕರೆಪತ್ರದಲ್ಲಿ ಸೂಚಿಸಲಾದ ಸ್ಥಳ, ದಿನಾಂಕ ಮತ್ತು ಸಮಯಕ್ಕೆ ಸರಿಯಾಗಿ ಮೂಲ ದಾಖಲಾತಿಗಳ ಹಾಗೂ ಅದರ ಪ್ರತಿಗಳೊಂದಿಗೆ ದೇಹದಾರ್ಢ್ಯತೆ ಪರಿಶೀಲನೆಗೆ ಹಾಜರಾಗುವುದು. ಗೈರುಹಾಜರಾದಲ್ಲಿ ಮತ್ತೊಮ್ಮೆ ಅವಕಾಶ ನೀಡಲಾಗುವುದಿಲ್ಲ. ಮೂಲ ದಾಖಲಾತಿಗಳ ಮತ್ತು ದೇಹದಾರ್ಢ್ಯತೆ ಪರಿಶೀಲನೆಗೆ ಅಂಚೆಯ ಮೂಲಕ ಪ್ರತ್ಯೇಕವಾಗಿ ಕರೆಪತ್ರಗಳನ್ನು ಕಳುಹಿಸಲಾಗುವುದಿಲ್ಲ.

9.5) ಮೂಲ ದಾಖಲಾತಿ ಪರಿಶೀಲನೆ ಹಾಗೂ ದೇಹದಾರ್ಢ್ಯತೆ ಪರಿಶೀಲನೆಯಲ್ಲಿ ಯಶಸ್ವಿಗೊಂಡ ಅಭ್ಯರ್ಥಿಗಳನ್ನು ಮಾತ್ರ ಆಯ್ಕೆಗಾಗಿ ಪರಿಶೀಲಿಸಿ, ಅಭ್ಯರ್ಥಿಗಳು ಸಾಮಾನ್ಯ ಸಾಮರ್ಥ್ಯ ಪರೀಕ್ಷೆ (Commong Aptitude Test) ನಲ್ಲಿ ಗಳಿಸಿದ ಅಂಕಗಳಲ್ಲಿ ಶೇಕಡ 75 ರಷ್ಟು ಅಂಕಗಳನ್ನು ಹಾಗೂ ಸದರಿ ಹುದ್ದೆಗೆ ನಿಗದಿಪಡಿಸಿರುವ ಶೈಕ್ಷಣಿಕ ವಿದ್ಯಾರ್ಹತೆಯಲ್ಲಿ ಗಳಿಸಿರುವ ಅಂಕಗಳಲ್ಲಿ ಶೇಕಡ 25 ರಷ್ಟು ಅಂಕಗಳನ್ನು ಸೇರಿಸಿ ಮೆರಿಟ್ ಆಧಾರದ ಮೇಲೆ ವರ್ಗವಾರು ಅಧಿಸೂಚಿಸಿರುವ ಹುದ್ದೆಗಳ ಸಂಖ್ಯೆ ಹಾಗೂ ಮೀಸಲಾತಿಗೆ ಅನುಗುಣವಾಗಿ ಆಯ್ಕೆ ಮಾಡಲಾಗುವುದು. ಆದರೆ ಯಾವುದೇ ಸಂದರ್ಶನವನ್ನು ನಡೆಸಲಾಗುವುದಿಲ್ಲ.

9.6) ಅಭ್ಯರ್ಥಿಗಳ ಅರ್ಹತೆ ಮತ್ತು ಆಯ್ಕೆಯ ವಿಷಯದಲ್ಲಿ ಬೆಂ.ಮ.ಸಾ.ಸಂಸ್ಥೆಯ ಆಯ್ಕೆ ಸಮಿತಿಯ / ಸಕ್ಷಮ ಪ್ರಾಧಿಕಾರಿಗಳ ನಿರ್ಧಾರವೇ ಅಂತಿಮವಾಗಿರುತ್ತದೆ.

9.7) ಪರೀಕ್ಷೆ ದಿನಾಂಕ, ಮೂಲ ದಾಖಲೆಗಳ ಪರಿಶೀಲನೆ ಮತ್ತು ದೇಹದಾರ್ಢ್ಯತೆ ಪರಿಶೀಲನೆ ದಿನಾಂಕವನ್ನು ಹಾಗೂ ಇತರೆ ಮಾಹಿತಿಗಳನ್ನು ಬೆಂ.ಮ.ಸಾ.ಸಂಸ್ಥೆಯ https://mybmtc.karnataka.gov.in ಅಥವಾ ಕರ್ನಾಟಕ ಪರೀಕ್ಷಾ ಪ್ರಾಧಿಕಾರದ ವೆಬ್‌ಸೈಟ್ http://kea.kar.nic.in ನಲ್ಲಿ ಪ್ರಕಟಿಸಲಾಗುವುದು/ಬಿತ್ತರಿಸಲಾಗುವುದು. ಆದ್ದರಿಂದ ಅಭ್ಯರ್ಥಿಗಳು ಸದರಿ ವೆಬ್‌ಸೈಟ್‌ಗಳನ್ನು ಕಾಲಕಾಲಕ್ಕೆ ಸಂಪರ್ಕಿಸುವುದು.

**10. ಸಾಮಾನ್ಯ ಸಾಮರ್ಥ್ಯ ಪರೀಕ್ಷಾ (Commong Aptitude Test) ವಿಧಾನ:**

10.1) ಅರ್ಜಿ ಸಲ್ಲಿಸಿದ ಎಲ್ಲಾ ಅಭ್ಯರ್ಥಿಗಳಿಗೆ ಸಾಮಾನ್ಯ ಸಾಮರ್ಥ್ಯ ಪರೀಕ್ಷೆಯನ್ನು (Common Aptitude Test) ನಡೆಸಲಾಗುವುದು.

10.2) ಮೇಲ್ಕಂಡ ಹುದ್ದೆಗಳಿಗೆ ಸಾಮಾನ್ಯ ಸಾಮರ್ಥ್ಯ ಪರೀಕ್ಷೆಯನ್ನು (Commong Aptitude Test) ಆಫ್‌ಲೈನ್–ಓಎಂಆರ್ ಮಾದರಿ (Offline-OMR type) ಮೂಲಕ ನಡೆಸಲಾಗುವುದು.

10.3) ಸಾಮಾನ್ಯ ಸಾಮರ್ಥ್ಯ ಪರೀಕ್ಷೆಯನ್ನು (Common Aptitude Test) ಬೆಂಗಳೂರು, ಮೈಸೂರು, ತುಮಕೂರು, ದಾವಣಗೆರೆ, ದಕ್ಷಿಣ ಕನ್ನಡ, ಶಿವಮೊಗ್ಗ, ಬೆಳಗಾವಿ, ಧಾರವಾಡ, ಬಳ್ಳಾರಿ, ಬೀದರ್, ಕೊಪ್ಪಳ, ರಾಯಚೂರು ಮತ್ತು ಕಲಬುರ್ಗಿ ಕೇಂದ್ರಗಳಲ್ಲಿ ನಡೆಸಲಾಗುವುದು. (ಆಡಳಿತಾತ್ಮಕ ಉದ್ದೇಶದಿಂದ ಜಿಲ್ಲಾ ಪರೀಕ್ಷಾ ಕೇಂದ್ರಗಳು ಬದಲಾವಣೆಯ ಷರತ್ತಿಗೆ ಒಳಪಟ್ಟಿರುತ್ತದೆ)

10.4) ಅಭ್ಯರ್ಥಿಗಳಿಗೆ ಪರೀಕ್ಷೆಯ ಪ್ರವೇಶ ಪತ್ರವನ್ನು ಕರ್ನಾಟಕ ಪರೀಕ್ಷಾ ಪ್ರಾಧಿಕಾರದ ವೆಬ್‌ಸೈಟ್‌ನಿಂದ ಡೌನ್‌ಲೋಡ್ ಮಾಡಿಕೊಳ್ಳಲು ಪ್ರಕಟಣೆಯ ಮೂಲಕ ತಿಳಿಸಲಾಗುವುದು ಹಾಗೂ ಈ ಬಗ್ಗೆ ಮಾಹಿತಿಯನ್ನು ಸದರಿ ಪ್ರಾಧಿಕಾರದ ವೆಬ್‌ಸೈಟ್‌ನಲ್ಲಿಯೂ ಪ್ರಕಟಿಸಲಾಗುವುದು.

10.5) ಅಭ್ಯರ್ಥಿಗಳು ಕಡ್ಡಾಯವಾಗಿ ಪ್ರವೇಶ ಪತ್ರಗಳನ್ನು ಡೌನ್‌ಲೋಡ್ ಮಾಡಿಕೊಂಡು ಒಂದು ಮೂಲ ಗುರುತಿನ ಚೀಟಿಯೊಂದಿಗೆ (ಪ್ಯಾನ್‌ಕಾರ್ಡ್ / ವಾಹನ ಚಾಲನ ಪರವಾನಗಿ / ಆಧಾರ್‌ಕಾರ್ಡ್ / ಪಾಸ್ಪೋರ್ಟ್ / ವೋಟರ್ ಐಡಿ/ ಸರ್ಕಾರಿ ನೌಕರರ ಐಡಿ) ಪರೀಕ್ಷಾ ಕೇಂದ್ರಗಳಿಗೆ ಹೋಗಬೇಕು. ತಪ್ಪಿದ್ದಲ್ಲಿ ಪರೀಕ್ಷಾ ಕೇಂದ್ರವನ್ನು ಪ್ರವೇಶಿಸಲು ಅನುಮತಿಸಲಾಗುವುದಿಲ್ಲ.

11. **ಪರೀಕ್ಷಾ ಮಾದರಿ, ಪಠ್ಯ ಕ್ರಮ, ಗರಿಷ್ಠ ಅಂಕಗಳು ಹಾಗೂ ಅವಧಿ:**

1. **ನಿರ್ವಾಹಕರು:**

| ಪತ್ರಿಕೆ/ Paper | ವಿಷಯ / Subject | ಅಂಕಗಳು/ Marks | ಅವಧಿ / Duration (ಗಂಟೆ / hours) |
|---|---|---|---|
| ಪತ್ರಿಕೆ–1 | (ಎ) ಪ್ರಚಲಿತ ಘಟನೆಗಳಿಗೆ ಸಂಬಂಧಿಸಿದ ಸಾಮಾನ್ಯ ಜ್ಞಾನದ ವಿಷಯಗಳು.<br>(ಬಿ) ದೈನಂದಿನ ಗ್ರಹಿಕೆಯ ವಿಷಯಗಳು<br>(ಸಿ) ಭಾರತದ ಸಂವಿಧಾನದ ಸ್ಥೂಲ ನೋಟದ ವಿಷಯಗಳು.<br>(ಡಿ) ವಿಶೇಷವಾಗಿ ಕರ್ನಾಟಕ್ಕೆ ಸಂಬಂಧಿಸಿದ ಭಾರತದ ಇತಿಹಾಸ.<br>(ಇ) ಕರ್ನಾಟಕ್ಕೆ ಸಂಬಂಧಿಸಿದಂತೆ ಭಾರತದ ಭೂಗೋಳ ವಿಷಯಗಳು.<br>(ಎಫ್) ರಾಜ್ಯ ಮತ್ತು ಪ್ರಾದೇಶಿಕ ಆಡಳಿತ ಕುರಿತ ವಿಷಯಗಳು.<br>(ಜಿ) ಗ್ರಾಮೀಣಾಭಿವೃದ್ಧಿ ಪಂಚಾಯತ್‌ರಾಜ್ ಸಂಸ್ಥೆಗಳು ಮತ್ತು ಗ್ರಾಮೀಣ ಸಹಕಾರ ಸಂಸ್ಥೆಗಳಿಗೆ ಸಂಬಂಧಿಸಿದ ಉಪಕ್ರಮಗಳನ್ನು ಒಳಗೊಂಡಂತೆ ಕರ್ನಾಟಕ ಆರ್ಥಿಕತೆಯ ಅಭಿವೃದ್ಧಿ ಕುರಿತ ವಿಷಯಗಳು.<br>(ಎಚ್) ಕರ್ನಾಟಕದ ಪರಿಸರ ಸಂಬಂಧಿ ಸಮಸ್ಯೆಗಳು ಮತ್ತು ಅಭಿವೃದ್ಧಿ ಕುರಿತ ವಿಷಯಗಳು. | 100 | 2 ಗಂಟೆ |
| ಪತ್ರಿಕೆ–2 | (ಎ) ಸಾಮಾನ್ಯ ಕನ್ನಡ (ಬಿ) ಸಾಮಾನ್ಯ ಇಂಗ್ಲೀಷ್<br>(ಸಿ) ಕಂಪ್ಯೂಟರ್ ಜ್ಞಾನ | 100 | 2 ಗಂಟೆ |

- ಸಾಮಾನ್ಯ ಸಾಮರ್ಥ್ಯ ಪರೀಕ್ಷೆಗೆ (Common Aptitude Test) ವಿವರವಾದ ವೇಳಾ ಪಟ್ಟಿಯನ್ನು ಪ್ರಾಧಿಕಾರದ ವೆಬ್‌ಸೈಟ್‌ನಲ್ಲಿ ನಂತರ ಪ್ರಕಟಿಸಲಾಗುವುದು.
- ಸಾಮಾನ್ಯ ಸಾಮರ್ಥ್ಯ ಪರೀಕ್ಷೆಯನ್ನು (Common Aptitude Test) ಆಫ್ ಲೈನ್–ಓಎಂಆರ್ ಮಾದರಿ (Offline-OMR type) ಮೂಲಕ ಸ್ಪರ್ಧಾತ್ಮಕ ಪರೀಕ್ಷೆ ನಡೆಸಲಾಗುವುದು.

**12. ಋಣಾತ್ಮಕ ಮೌಲ್ಯಮಾಪನ (Negative Valuation):–**

12.1) ಸಾಮಾನ್ಯ ಸಾಮರ್ಥ್ಯ ಪರೀಕ್ಷೆಯ (Common Aptitude Test) ಪ್ರಶ್ನೆ ಪತ್ರಿಕೆಗಳಲ್ಲಿನ ಪ್ರತಿಯೊಂದು ಪ್ರಶ್ನೆಗೂ 04 ಪರ್ಯಾಯ ಉತ್ತರಗಳಿದ್ದು, ಅಭ್ಯರ್ಥಿಯು ಯಾವುದಾದರೂ ಒಂದು ಸರಿ ಉತ್ತರವನ್ನು ಮಾತ್ರ ಆಯ್ಕೆ ಮಾಡತಕ್ಕದ್ದು.

12.2) ಪ್ರತಿ ತಪ್ಪು ಉತ್ತರಕ್ಕೆ ನಾಲ್ಕನೇ ಒಂದು ಅಂಶ ದಷ್ಟು (¼) ಅಂಕಗಳನ್ನು ಕಳೆಯಲಾಗುವುದು. ಸಾಮಾನ್ಯ ಸಾಮರ್ಥ್ಯ ಪರೀಕ್ಷೆಯ (Common Aptitude Test) ಪ್ರಶ್ನೆ ಪತ್ರಿಕೆಗಳು ಕನ್ನಡ ಮತ್ತು ಆಂಗ್ಲ ಭಾಷೆಗಳೆರಡರಲ್ಲೂ ಇರುತ್ತವೆ.

12.3) ಕನ್ನಡ ಭಾಷೆಯಲ್ಲಿ ಪ್ರಶ್ನೆಗಳ ಭಾಷಾಂತರದಲ್ಲಿ ಏನಾದರೂ ವ್ಯತ್ಯಾಸ ಕಂಡುಬಂದಲ್ಲಿ ಅಭ್ಯರ್ಥಿಗಳು ಆಂಗ್ಲ ಭಾಷೆ ಪ್ರಶ್ನೆಗಳನ್ನು ನೋಡುವುದು ಹಾಗೂ ಇದೇ ಅಂತಿಮವಾಗಿರುತ್ತದೆ.

**ಸಾಮಾನ್ಯ ಅರ್ಹತಾ ಷರತ್ತುಗಳು:–**

| | |
|---|---|
| ಅ) | ಭಾರತೀಯ ನಾಗರೀಕರಾಗಿರತಕ್ಕದ್ದು. |
| ಆ) | ಕರ್ನಾಟಕ ಪರೀಕ್ಷಾ ಪ್ರಾಧಿಕಾರ ಅಥವಾ ಯಾವುದೇ ವಿಶ್ವವಿದ್ಯಾನಿಲಯಗಳು ಅಥವಾ ರಾಜ್ಯದ ಯಾವುದೇ ಸಾರಿಗೆ ಸಂಸ್ಥೆಗಳಿಂದ ನಡೆಸಲಾಗಿರುವ ಪರೀಕ್ಷೆಗಳಿಂದ, ಅಥವಾ ನೇಮಕಾತಿಗಳಿಂದ ತಾತ್ಕಾಲಿಕವಾಗಿ ಡಿಬಾರ್ ಆದ ಅಥವಾ ಅನರ್ಹಗೊಂಡ ವ್ಯಕ್ತಿಯು ಸಂಸ್ಥೆಯು ಎಲ್ಲಾ ಸಂದರ್ಭಗಳನ್ನು ಮರುಪರಿಶೀಲಿಸಿ ಅವರು ನೇಮಕಾತಿಗೆ ಅರ್ಹರೆಂದು ಪರಿಗಣಿಸುವವರೆಗೂ ನೇಮಕಾತಿಗೆ ಅರ್ಹರಾಗುವುದಿಲ್ಲ. |
| ಇ) | ನೈತಿಕ ದುರ್ನಡತೆಯಿಂದಾಗಿ / ನೀತಿಬಾಹಿರ ಚಟುವಟಿಕೆಗಳಿಂದಾಗಿ ನ್ಯಾಯಾಲಯದಿಂದ ಶಿಕ್ಷೆಗೊಳಪಟ್ಟಿರುವ ವ್ಯಕ್ತಿ ಅಥವಾ ಈ ಸಂಸ್ಥೆಯಲ್ಲಿ ಅಥವಾ ರಾಜ್ಯ / ಕೇಂದ್ರ / ಸ್ಥಳೀಯ ಸಂಸ್ಥೆ / ಕೈಗಾರಿಕಾ / ವಾಣಿಜ್ಯಕ್ಕೆ ಸಂಬಂಧಪಟ್ಟ ಅಥವಾ ರಾಜ್ಯ ಸಾರಿಗೆ ಅಧೀನದಲ್ಲಿರುವ ಕಛೇರಿಗಳಲ್ಲಿ ನೈತಿಕ ದುರ್ನಡತೆಯಿಂದಾಗಿ / ನೀತಿ ಬಾಹಿರ ಚಟುವಟಿಕೆಗಳಲ್ಲಿ ಒಳಗಾಗಿ ಅಥವಾ ಈ ಹಿಂದೆ ರಾಜ್ಯದ ಯಾವುದೇ ಸಾರಿಗೆ ಸಂಸ್ಥೆಗಳಲ್ಲಿ ಕಾರ್ಯ ನಿರ್ವಹಿಸುತ್ತಿದ್ದ ಸಂದರ್ಭದಲ್ಲಿ ಕಾನೂನು / ನೀತಿ ಬಾಹಿರ ಚಟುವಟಿಕೆಗಳಲ್ಲಿ ತೊಡಗಿ ಸೇವೆಯಿಂದ ತೆಗೆದು ಹಾಕಿದ್ದಲ್ಲಿ / ವಜಾ ಮಾಡಲ್ಪಟ್ಟಿದ್ದಲ್ಲಿ / ಕಾನೂನು ಬಾಹಿರವಾಗಿ ಬಹು ಪತ್ನಿತ್ವ/ಪತಿತ್ವ ಹೊಂದಿರುವ, ಇತ್ಯಾದಿ ಅಭ್ಯರ್ಥಿಗಳು ಅರ್ಜಿ ಸಲ್ಲಿಸಲು ಹಾಗೂ ನೇಮಕಾತಿಗೆ ಅನರ್ಹರಾಗಿರುತ್ತಾರೆ. |
| ಈ) | ಅಭ್ಯರ್ಥಿಯು ಮಾನಸಿಕವಾಗಿ ಮತ್ತು ದೈಹಿಕವಾಗಿ ಆರೋಗ್ಯವಂತರಾಗಿರಬೇಕು ಮತ್ತು ಅವರ ನೇಮಕಾತಿಯು ಕರ್ತವ್ಯಗಳ ದಕ್ಷ ನಿರ್ವಹಣೆಗೆ ಆತಂಕವನ್ನುಂಟು ಮಾಡುವ ಸಂಭವ ಇರುವ ಯಾವುದೇ ದೈಹಿಕ ನ್ಯೂನತೆಯಿಂದ ಮುಕ್ತರಾಗಿರಬೇಕು. |
| ಉ) | ಸರ್ಕಾರದ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ ವಿಕಲಚೇತನರ ಮತ್ತು ಹಿರಿಯ ನಾಗರೀಕರ ಸಬಲೀಕರಣ ಇಲಾಖೆಯ ನಡವಳಿ ಪತ್ರ ಸಂಖ್ಯೆ:ಮಮಿ 343 ಪಿಹೆಚ್‌ಪಿ 2012 ದಿನಾಂಕ: 18.09.2013ರನ್ವಯ 'ನಿರ್ವಾಹಕ' ಹುದ್ದೆಗೆ ವಿನಾಯತಿ ಪಡೆಯಲಾಗಿದ್ದು, ಅದರಂತೆ ನಿರ್ವಾಹಕ ಹುದ್ದೆಗೆ ವಿಕಲಚೇತನ ಅಭ್ಯರ್ಥಿಗಳನ್ನು ಪರಿಗಣಿಸಲು ಅವಕಾಶವಿರುವುದಿಲ್ಲ. |
| ಊ) | ದೈಹಿಕವಾಗಿ ಅನರ್ಹರಾಗಿದ್ದಾರೆಂಬುದಾಗಿ ವೈದ್ಯಕೀಯ ಮಂಡಳಿಯ ವರದಿಯ ಮೇಲೆ ಅನರ್ಹರೆಂಬುದಾಗಿ ತಿರಸ್ಕರಿಸುವ ಪೂರ್ಣ ವಿವೇಚನೆಯನ್ನು ಸಂಸ್ಥೆಯು ಕಾಯ್ದಿರಿಸಿಕೊಂಡಿದೆ ಮತ್ತು ಸಂಸ್ಥೆಯ ವಿವೇಚನೆಯು ಯಾವುದೇ ವಿಧದಲ್ಲೂ ಈ ನಿಯಮಗಳ ಮೂಲಕ ಸೀಮಿತವಾಗಿರುವುದಿಲ್ಲ. |
| ಋ) | ಸ್ಥಳೀಯ ವ್ಯಕ್ತಿಗಳು ಕಲ್ಯಾಣ–ಕರ್ನಾಟಕ ಪ್ರದೇಶದ ವ್ಯಾಪ್ತಿಗೆ ಒಳಪಟ್ಟಿರುವ ಅಭ್ಯರ್ಥಿಗಳಾಗಿರಬೇಕು. |

ಸೂಚನೆ: ನಿಗದಿತ ಶೈಕ್ಷಣಿಕ ವಿದ್ಯಾರ್ಹತೆಯ ಜೊತೆಗೆ ಈ ಮೇಲ್ಕಂಡ ಷರತ್ತುಗಳನ್ನು ಪೂರೈಸುವ ಅಭ್ಯರ್ಥಿಗಳು ಮಾತ್ರ ನೇಮಕಾತಿಗಾಗಿ ಅರ್ಜಿ ಸಲ್ಲಿಸಲು ಅರ್ಹತೆಯನ್ನು ಹೊಂದಿರುತ್ತಾರೆ.

**ಅಭ್ಯರ್ಥಿಗಳಿಗೆ ಸೂಚನೆ:**

| |
|---|
| ಈ ಕೆಳಕಂಡ ಪ್ರಮಾಣ ಪತ್ರಗಳನ್ನು ಅರ್ಜಿ ಸಲ್ಲಿಸಲು ನಿಗದಿಪಡಿಸಿದ ಕೊನೆಯ ದಿನಾಂಕದಂದು ಚಾಲ್ತಿಯಲ್ಲಿರುವಂತೆ ಪಡೆದಿರತಕ್ಕದ್ದು. ತಪ್ಪಿದ್ದಲ್ಲಿ ಅವರ ಮೀಸಲಾತಿ/ಅಭ್ಯರ್ಥಿತನವನ್ನು ಪರಿಗಣಿಸಲಾಗುವುದಿಲ್ಲ. |
| (1) ಜನ್ಮ ದಿನಾಂಕವನ್ನು ನಮೂದಿಸಿರುವ ಎಸ್.ಎಸ್.ಎಲ್.ಸಿ. ಅಥವಾ ತತ್ಸಮಾನ ಪರೀಕ್ಷೆಯ ಅಂಕಪಟ್ಟಿ/ ಎಸ್.ಎಸ್.ಎಲ್.ಸಿ ವರ್ಗಾವಣೆಯ ಪ್ರಮಾಣ ಪತ್ರ /ಜನ್ಮ ದಿನಾಂಕವನ್ನು ತೋರಿಸುವ ಸಂಚಿತ ದಾಖಲೆಯ ಉದ್ಧೃತ ಭಾಗ (Extract of cumulative record). |
| (2) ಸೈನಿಕ ಸೇವೆಯಿಂದ ಬಿಡುಗಡೆಯಾದ/ ಮುಕ್ತಿ ಹೊಂದಿದ ಬಗೆಗಿನ ಪ್ರಮಾಣ ಪತ್ರ (Discharge certificate) ಮತ್ತು ಪಿಂಚಣಿ ಪಡೆಯುತ್ತಿರುವ ದಾಖಲೆಯ ಪ್ರಮಾಣ ಪತ್ರ. (ಮಾಜಿ ಸೈನಿಕ ಮೀಸಲಾತಿ ಬಯಸಿದಲ್ಲಿ). |
| (3) ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ, ಪ್ರವರ್ಗ-1, ಪ್ರವರ್ಗ-2ಎ, 2ಬಿ, 3ಎ, 3ಬಿ ಮೀಸಲಾತಿ ಅಭ್ಯರ್ಥಿಗಳು ನಮೂನೆ ಡಿ/ಇ/ಎಫ್ ನಲ್ಲಿ ತಹಶೀಲ್ದಾರರಿಂದ ಪಡೆದ ಪ್ರಮಾಣ ಪತ್ರ. (ಮೀಸಲಾತಿ ಬಯಸಿದಲ್ಲಿ) |
| (4) ಸಾಮಾನ್ಯ ಅರ್ಹತೆ ಅಭ್ಯರ್ಥಿಗಳು ಗ್ರಾಮೀಣ ಮೀಸಲಾತಿ ಪ್ರಮಾಣ ಪತ್ರ ನಮೂನೆ-1 ಮತ್ತು 2ರಲ್ಲಿ /ಇತರೆ ಅಭ್ಯರ್ಥಿಗಳು ನಮೂನೆ- 2ರಲ್ಲಿ (ಮೀಸಲಾತಿ ಬಯಸಿದಲ್ಲಿ). |
| (5) ಕನ್ನಡ ಮಾಧ್ಯಮದಲ್ಲಿ ವ್ಯಾಸಂಗ ಮಾಡಿದ ಪ್ರಮಾಣ ಪತ್ರ (ಮೀಸಲಾತಿ ಬಯಸಿದಲ್ಲಿ) |
| (6) ಯೋಜನೆಗಳಿಂದ ನಿರಾಶ್ರಿತರಾಗಿರುವ ಅಭ್ಯರ್ಥಿ ಪ್ರಮಾಣ ಪತ್ರ (ಮೀಸಲಾತಿ ಬಯಸಿದಲ್ಲಿ) |
| (7) ನಿರಾಕ್ಷೇಪಣ ಪ್ರಮಾಣ ಪತ್ರ (ಇಲಾಖಾ ಅಭ್ಯರ್ಥಿಗಳಿಗೆ) (ಆಯ್ಕೆಯಾದ ನಂತರ ಸಲ್ಲಿಸುವುದು) |
| (8) ತೃತೀಯ ಲಿಂಗದ ಅಭ್ಯರ್ಥಿಗಳ ಮೀಸಲಾತಿ ಪ್ರಮಾಣ ಪತ್ರ (ಮೀಸಲಾತಿ ಬಯಸಿದಲ್ಲಿ) |
| (9) ಕಲ್ಯಾಣ-ಕರ್ನಾಟಕ ಪ್ರದೇಶದ ಮೀಸಲಾತಿ ಪ್ರಮಾಣ ಪತ್ರ (ಮೀಸಲಾತಿ ಬಯಸಿದಲ್ಲಿ) |
| (10) ಸೇವಾ ಪ್ರಮಾಣ ಪತ್ರಗಳು (ನಿಗದಿಪಡಿಸಿದ್ದಲ್ಲಿ) |
| (11) ಯೋಜನೆಗಳಿಂದ ನಿರ್ವಸಿತರಾದ ಬಗ್ಗೆ ಪ್ರಮಾಣ ಪತ್ರಗಳು (ಮೀಸಲಾತಿ ಬಯಸಿದಲ್ಲಿ) |

15. **ಮೀಸಲಾತಿ ಪ್ರಮಾಣ ಪತ್ರಗಳು:-**

ಈ ಕೆಳಕಂಡ ಪ್ರಮಾಣ ಪತ್ರಗಳನ್ನು ನಿಗದಿತ ನಮೂನೆಯಲ್ಲಿ ON-LINE ಮೂಲಕ ಅರ್ಜಿ ಭರ್ತಿ ಮಾಡಲು ನಿಗದಿಪಡಿಸಿದ ಕೊನೆಯ ದಿನಾಂಕದೊಳಗೆ ಸಂಬಂಧಪಟ್ಟ ಪ್ರಾಧಿಕಾರಿಗಳಿಂದ ಪಡೆದಿಟ್ಟುಕೊಂಡು ಮೂಲ ದಾಖಲಾತಿಯ ಪರಿಶೀಲನೆ ಸಮಯದಲ್ಲಿ ಅದೇ ಮೀಸಲಾತಿ ಪ್ರಮಾಣ ಪತ್ರದ ಹಾಗೂ ಇತರೇ ಪ್ರಮಾಣ ಪತ್ರಗಳ ಮೂಲ ಪ್ರತಿಯನ್ನು ಪರಿಶೀಲನೆಗೆ ಹಾಜರುಪಡಿಸಬೇಕು.

<table>
<tr><td rowspan="3">ಜಾತಿ ಮೀಸಲಾತಿ ಪ್ರಮಾಣ ಪತ್ರಗಳು</td><td>ಮೀಸಲಾತಿ ಪ್ರಮಾಣ ಪತ್ರಗಳನ್ನು ಸಲ್ಲಿಸಬೇಕಾದ ನಮೂನೆಗಳು:-<br><table>
<tr><td>ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡಕ್ಕೆ ಸೇರಿದ ಅಭ್ಯರ್ಥಿಗಳು</td><td>ನಮೂನೆ 'ಡಿ'</td></tr>
<tr><td>ಪ್ರವರ್ಗ-1ಕ್ಕೆ ಸೇರಿದ ಅಭ್ಯರ್ಥಿಗಳು</td><td>ನಮೂನೆ 'ಇ'</td></tr>
<tr><td>ಪ್ರವರ್ಗ-2ಎ, 2ಬಿ, 3ಎ ಮತ್ತು 3ಬಿ ಮೀಸಲಾತಿಗೆ ಸೇರಿದ ಅಭ್ಯರ್ಥಿಗಳು</td><td>ನಮೂನೆ-'ಎಫ್'</td></tr>
</table></td></tr>
<tr><td>ನಮೂನೆಗಳನ್ನು ಅಧಿಸೂಚನೆಯ ಕೊನೆಯ ಭಾಗದಲ್ಲಿ ಕ್ರಮವಾಗಿ ಅನುಬಂಧ-ಅ, ಅ(1) & ಅ(2) ರಲ್ಲಿ ತೋರಿಸಲಾಗಿದೆ. ಹಿಂದುಳಿದ ವರ್ಗಗಳ ಪ್ರವರ್ಗ-2(ಎ), ಪ್ರವರ್ಗ-2(ಬಿ), ಪ್ರವರ್ಗ-3(ಎ) ಮತ್ತು ಪ್ರವರ್ಗ-3(ಬಿ) ಮೀಸಲಾತಿ ಪ್ರಮಾಣ ಪತ್ರಗಳು 05 ವರ್ಷ ಚಾಲ್ತಿಯಲ್ಲಿರುತ್ತವೆ (Government Notification No SWD 155 BCA 2012 Dt: 17-02-2012 ರನ್ವಯ).<br>ಅಭ್ಯರ್ಥಿಗಳು ಪಡೆದಿರುವ ಜಾತಿ ಮತ್ತು ಆದಾಯ ಪ್ರಮಾಣ ಪತ್ರವು ಅರ್ಜಿ ಸಲ್ಲಿಸಲು ನಿಗದಿಪಡಿಸಿದ ಕೊನೆಯ ದಿನಾಂಕದಂದು ಚಾಲ್ತಿಯಲ್ಲಿರುವಂತೆ ಕಡ್ಡಾಯವಾಗಿ ಪಡೆದಿರತಕ್ಕದ್ದು.</td></tr>
<tr><td>ಪರಿಶಿಷ್ಟ ಜಾತಿ/ಪರಿಶಿಷ್ಟ ಪಂಗಡ/ಪ್ರವರ್ಗ-1 ರ ಅಭ್ಯರ್ಥಿಗಳು ಪಡೆದಿರುವ/ಪಡೆಯುವ ಜಾತಿ ಪ್ರಮಾಣ ಪತ್ರಗಳು ಜೀವಿತ ಅವಧಿಯವರೆಗೆ ಅಥವಾ ರದ್ದು ಮಾಡುವವರೆಗೆ ಸಿಂಧುತ್ವವನ್ನು ಹೊಂದಿದ್ದು, ಇಂತಹ ಪ್ರಮಾಣ ಪತ್ರಗಳನ್ನು ದಿನಾಂಕದ ಮಿತಿಯಿಲ್ಲದೇ ಪರಿಗಣಿಸಲಾಗುವುದು (ಸರ್ಕಾರದ ಸುತ್ತೋಲೆ ಸಂಖ್ಯೆ SWD 155 BCA 2011 ದಿನಾಂಕ:22-02-2012).</td></tr>
</table>

| | |
|---|---|
| ಗ್ರಾಮೀಣ ಅಭ್ಯರ್ಥಿಗಳಿಗೆ ಮೀಸಲಾತಿ | ಸರ್ಕಾರಿ ಆದೇಶ ಸಂಖ್ಯೆ ಸಿಆಸುಇ 08 ಸೆನೆನಿ 2001 ದಿನಾಂಕ:13-02-2001 ರನ್ವಯ ಗ್ರಾಮೀಣ ಮೀಸಲಾತಿಯನ್ನು ಬಯಸುವ ಅಭ್ಯರ್ಥಿಗಳು ಪ್ರಸ್ತುತ ಚಾಲ್ತಿಯಲ್ಲಿರುವ ನಿಯಮಗಳ ರೀತ್ಯಾ 1 ನೇ ತರಗತಿಯಿಂದ 10ನೇ ತರಗತಿಯವರೆಗೆ ಗ್ರಾಮೀಣ ಮೀಸಲಾತಿಗೆ ಒಳಪಡುವ ಪ್ರದೇಶಗಳಲ್ಲಿ ವ್ಯಾಸಂಗ ಮಾಡಿ ಉತ್ತೀರ್ಣರಾಗಿರುವವರು ಮಾತ್ರ ಈ ಮೀಸಲಾತಿಯನ್ನು ಪಡೆಯಲು ಅರ್ಹರು. |
| | ಗ್ರಾಮೀಣ ಅಭ್ಯರ್ಥಿಗಳೆಂದು ಮೀಸಲಿರಿಸಿದ ಹುದ್ದೆಗಳನ್ನು ಕ್ಲೇಮ್ ಮಾಡುವ ಸಾಮಾನ್ಯ ಅರ್ಹತೆಯ ಅಭ್ಯರ್ಥಿಗಳು ನಮೂನೆ-2ನ್ನು ಸಂಬಂಧಪಟ್ಟ ಶಾಲಾ ಮುಖ್ಯೋಪಾದ್ಯಾಯರ ಸಹಿ ಮತ್ತು ಮೊಹರು ಹೊಂದಿದ ಪ್ರಮಾಣ ಪತ್ರದ ಮೇಲೆ ಸಂಬಂಧಪಟ್ಟ ಕ್ಷೇತ್ರ ಶಿಕ್ಷಣಾಧಿಕಾರಿಯವರ ಮೇಲು ಸಹಿ, ಮೊಹರು ಮತ್ತು ಪ್ರಮಾಣ ಪತ್ರದ ನೀಡಿದ ದಿನಾಂಕದೊಂದಿಗೆ ನಿಗಧಿತ ನಮೂನೆಯಲ್ಲಿ ಪಡೆದಿರತಕ್ಕದ್ದು. ಈ ಪ್ರಮಾಣ ಪತ್ರವಲ್ಲದೇ ಮೇಲುಸ್ಥರಕ್ಕೆ (Creamy layer) ಸೇರಿಲ್ಲದಿರುವ ಬಗ್ಗೆ ನಮೂನೆ-1 ರಲ್ಲಿ ಪ್ರಮಾಣ ಪತ್ರವನ್ನು ಕಡ್ಡಾಯವಾಗಿ ಸಂಬಂಧಿತ ತಹಶೀಲ್ದಾರ್ ರವರಿಂದ ಪಡೆದಿಟ್ಟುಕೊಂಡಿರತಕ್ಕದ್ದು (ಈ ಪ್ರಮಾಣ<br>ಪತ್ರದ ನಮೂನೆಯನ್ನು ಅಧಿಸೂಚನೆಯ ಕೊನೆಯ ಭಾಗದಲ್ಲಿ **ಅನುಬಂಧ-ಆ** ರಲ್ಲಿ ತೋರಿಸಲಾಗಿದೆ). ನಮೂನೆ-1 ರಲ್ಲಿ ಪಡೆದಿರುವ ಪ್ರಮಾಣ ಪತ್ರವು ಅರ್ಜಿ ಸಲ್ಲಿಸಲು ನಿಗದಿಪಡಿಸಿದ ಕೊನೆಯ ದಿನಾಂಕದಂದು ಚಾಲ್ತಿಯಲ್ಲಿರತಕ್ಕದ್ದು. |
| | ಅಂತೆಯೇ ಗ್ರಾಮೀಣ ಮೀಸಲಾತಿ ಬಯಸುವ ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ, ಪ್ರವರ್ಗ-1, ಪ್ರವರ್ಗ-2ಎ, 2ಬಿ, 3ಎ, 3ಬಿ ಮೀಸಲಾತಿಗೆ ಸೇರಿದ ಅಭ್ಯರ್ಥಿಗಳು ಕಡ್ಡಾಯವಾಗಿ ಗ್ರಾಮೀಣ ಮೀಸಲಾತಿಯ ಪ್ರಮಾಣ ಪತ್ರವನ್ನು ನಮೂನೆ-2ರಲ್ಲಿ ಸಂಬಂಧಪಟ್ಟ ಶಾಲಾ ಮುಖ್ಯೋಪಾದ್ಯಾಯರ ಸಹಿ ಮತ್ತು ಮೊಹರು ಹೊಂದಿದ ಪ್ರಮಾಣ ಪತ್ರದ ಮೇಲೆ ಸಂಬಂಧಪಟ್ಟ ಕ್ಷೇತ್ರ ಶಿಕ್ಷಣಾಧಿಕಾರಿಯವರ ಮೇಲು ಸಹಿ, ಮೊಹರು ಮತ್ತು ಪ್ರಮಾಣ ಪತ್ರ ನೀಡಿದ ದಿನಾಂಕದೊಂದಿಗೆ ನಿಗದಿತ ನಮೂನೆಯಲ್ಲಿ ಪಡೆದಿರತಕ್ಕದ್ದು. (ಈ ಪ್ರಮಾಣ ಪತ್ರದ ನಮೂನೆಯನ್ನು ಅಧಿಸೂಚನೆಯ ಕೊನೆಯ ಭಾಗದಲ್ಲಿ **ಅನುಬಂಧ-ಆ(1)** ರಲ್ಲಿ ತೋರಿಸಲಾಗಿದೆ). ತಪ್ಪಿದಲ್ಲಿ ಅಂತಹ ಅಭ್ಯರ್ಥಿಗಳು ಗ್ರಾಮೀಣ ಮೀಸಲಾತಿಗೆ ಅನರ್ಹರಾಗುತ್ತಾರೆ. |
| | ಜಾತಿ ಮೀಸಲಾತಿ ಪ್ರಮಾಣ ಪತ್ರಗಳು ತಿರಸ್ಕೃತವಾದಲ್ಲಿ, ಅಂತಹ ಅಭ್ಯರ್ಥಿಗಳು ಗ್ರಾಮೀಣ ಮೀಸಲಾತಿಗೆ ಅವಕಾಶ ಬೇಕಾಗಿದಲ್ಲಿ ಮೇಲುಸ್ಥರಕ್ಕೆ (Creamy layer) ಸೇರಿಲ್ಲದಿರುವ ಬಗ್ಗೆ ನಮೂನೆ-1ರಲ್ಲಿ ಸಕ್ಷಮ ಪ್ರಾಧಿಕಾರಸ್ಥರಿಂದ ಪಡೆದ ಚಾಲ್ತಿಯಲ್ಲಿರುವ ಪ್ರಮಾಣ ಪತ್ರವನ್ನು ಸಲ್ಲಿಸಿದ್ದಲ್ಲಿ ಮಾತ್ರ ಗ್ರಾಮೀಣ ಮೀಸಲಾತಿಗೆ ಅರ್ಹರಾಗುತ್ತಾರೆ. |
| ಕನ್ನಡ ಮಾಧ್ಯಮ ಅಭ್ಯರ್ಥಿಗಳಿಗೆ ಮೀಸಲಾತಿ | ಸರ್ಕಾರಿ ಅಧಿಸೂಚನೆ ಸಂಖ್ಯೆ ಸಿಆಸುಇ 71 ಸೆನೆನಿ 2001 ದಿನಾಂಕ:24.10.2002 ರನ್ವಯ ಕನ್ನಡ ಮಾಧ್ಯಮದ ಅಭ್ಯರ್ಥಿಗಳಿಗೆಂದು ಮೀಸಲಿರಿಸಿದ ಹುದ್ದೆಗಳನ್ನು ಕ್ಲೇಮು ಮಾಡುವ ಅಭ್ಯರ್ಥಿಗಳು 1ನೇ ತರಗತಿಯಿಂದ 10ನೇ ತರಗತಿಯವರೆಗೆ ಕನ್ನಡ ಮಾಧ್ಯಮದಲ್ಲಿ ವ್ಯಾಸಂಗ ಮಾಡಿರುವ ಬಗ್ಗೆ ಸಂಬಂಧಪಟ್ಟ ಶಾಲೆಯ ಮುಖ್ಯೋಪಾಧ್ಯಾಯರ ಸಹಿ, ಮೊಹರು ಮತ್ತು ಪ್ರಮಾಣ ಪತ್ರ ನೀಡಿದ ದಿನಾಂಕದೊಂದಿಗೆ ನಿಗದಿತ ನಮೂನೆಯಲ್ಲಿ ಪಡೆದಿರತಕ್ಕದ್ದು. (ಈ ಪ್ರಮಾಣ ಪತ್ರದ ನಮೂನೆಯನ್ನು ಅಧಿಸೂಚನೆಯ ಕೊನೆಯ ಭಾಗದಲ್ಲಿ **ಅನುಬಂಧ-ಇ** ರಲ್ಲಿ ತೋರಿಸಲಾಗಿದೆ). |

| | |
|---|---|
| ಮಾಜಿ ಸೈನಿಕರಿಗೆ ಮೀಸಲಾತಿ ಮಾಜಿ ಸೈನಿಕರಿಗೆ ಮೀಸಲಾತಿ | ಮಾಜಿ ಸೈನಿಕ ಮೀಸಲಾತಿಯನ್ನು ಬಯಸುವ ಅಭ್ಯರ್ಥಿಗಳು ಈ ಸಂಬಂಧ ಪ್ರಮಾಣ ಪತ್ರಗಳನ್ನು ಪಡೆದಿರತಕ್ಕದ್ದು. (ಈ ಪ್ರಮಾಣ ಪತ್ರದ ನಮೂನೆಯನ್ನು ಅಧಿಸೂಚನೆಯ ಕೊನೆಯ ಭಾಗದಲ್ಲಿ **ಅನುಬಂಧ-ಈ** ರಲ್ಲಿ ತೋರಿಸಲಾಗಿದೆ).<br>(1) ಮಾಜಿ ಸೈನಿಕ ಎಂದರೆ ಸಶಸ್ತ್ರ ದಳಗಳಾದ ನಿಯಮಿತ ಭೂದಳ, ನೌಕಾದಳ ಮತ್ತು ವಾಯು ದಳದಲ್ಲಿ ಯಾವುದೇ ಶ್ರೇಣಿಯಲ್ಲಿ (ಯೋಧ ಅಥವಾ ಯೋಧನಾಗಿಲ್ಲದೇ) ಸೇವೆ ಸಲ್ಲಿಸಿರುವ ವ್ಯಕ್ತಿ ಎಂದು ಅರ್ಥ.<br>ಆದರೆ, ಡಿಫೆನ್ಸ್ ಸೆಕ್ಯುರಿಟಿ ಕೋರ್, ಜನರಲ್ ರಿಸರ್ವ್ ಇಂಜಿನಿಯರಿಂಗ್ ಫೋರ್ಸ್, ಲೋಕ ಸಹಾಯಕ ಸೇನಾ ಮತ್ತು ಪ್ಯಾರಾ ಮಿಲಿಟರಿ ದಳದಲ್ಲಿ ಸೇವೆ ಸಲ್ಲಿಸಿದ ವ್ಯಕ್ತಿ ಸೇರ್ಪಡೆಯಾಗುವುದಿಲ್ಲ ಮತ್ತು,<br>(ಅ) ಅಂತಹ ಸೇವೆಯಿಂದ ನಿವೃತ್ತಿ ಹೊಂದಿದ ನಂತರ ನಿವೃತ್ತಿ ಪಿಂಚಣಿ ಪಡೆಯುತ್ತಿರುವ<br>**ಅಥವಾ**<br>(ಆ) ವೈದ್ಯಕೀಯ ಕಾರಣಗಳಿಂದ ಮಿಲಿಟರಿ ಸೇವೆಯಿಂದ ಬಿಡುಗಡೆಯಾದ ಅಥವಾ ವ್ಯಕ್ತಿಯ ಹಿಡಿತಕ್ಕೂ ಮೀರಿದ ಪರಿಸ್ಥಿತಿಗಳಿಂದ ಮತ್ತು ವೈದ್ಯಕೀಯ ಅಥವಾ ಅಸಾಮರ್ಥ್ಯದ ಪಿಂಚಣಿ ಪಡೆದು ಅಂತಹ ಸೇವೆಯಲ್ಲಿ ಬಿಡುಗಡೆಯಾದವನು<br>**ಅಥವಾ**<br>(ಇ) ಸ್ವಂತ ಕೋರಿಕೆ ಹೊರತುಪಡಿಸಿ ಸಿಬ್ಬಂದಿ ಕಡಿತದ ಪರಿಣಾಮದಿಂದ ಅಂತಹ ಸೇವೆಯಿಂದ ಬಿಡುಗಡೆ ಹೊಂದಿದ ವ್ಯಕ್ತಿ<br>**ಅಥವಾ**<br>(ಈ) ತನ್ನ ಸ್ವಂತ ಕೋರಿಕೆಯ ಮೇರೆಗೆ ಅಥವಾ ದುರ್ನಡತೆ ಅಥವಾ ಅಸಾಮರ್ಥ್ಯ ಕಾರಣದಿಂದಾಗಿ ತೆಗೆದುಹಾಕಿರುವ ಅಥವಾ ಕರ್ತವ್ಯದಿಂದ ವಜಾ ಮಾಡಿದ ವ್ಯಕ್ತಿಗಳನ್ನು ಹೊರತುಪಡಿಸಿ, ನಿರ್ದಿಷ್ಟ ಅವಧಿಯನ್ನು ಪೂರೈಸಿದ ತರುವಾಯ ಬಿಡುಗಡೆ ಹೊಂದಿದ ವ್ಯಕ್ತಿ ಮತ್ತು ಗ್ರಾಚ್ಯುಟಿ ಪಡೆಯುತ್ತಿರುವ ವ್ಯಕ್ತಿ ಮತ್ತು ಪ್ರಾಂತೀಯ ಸೇವೆಯ ಈ ಕೆಳಗೆ ಹೆಸರಿಸಿದ ವರ್ಗದ ಸಿಬ್ಬಂದಿಯವರು.<br>(i) ನಿರಂತರ ಸೇವೆ ಸಲ್ಲಿಸಿ ನಿವೃತ್ತಿ ಹೊಂದಿದ ಪಿಂಚಣಿದಾರರು.<br>(ii) ಮಿಲಿಟರಿ ಸೇವೆಯಿಂದಾಗಿ ಉಂಟಾದ ದೈಹಿಕ ಅಸಾಮರ್ಥ್ಯತೆ ಹೊಂದಿ ಬಿಡುಗಡೆಯಾದ ವ್ಯಕ್ತಿ.<br>(iii) ಗ್ಯಾಲಂಟ್ರಿ ಪ್ರಶಸ್ತಿ ವಿಜೇತರು<br>2) ಸೇನೆಯಿಂದ ಬಿಡುಗಡೆಯಾದ ವ್ಯಕ್ತಿಗಳು ಅವರ ಬಿಡುಗಡೆ ಪ್ರಮಾಣ ಪತ್ರವನ್ನು (ಗುರುತಿನ ಚೀಟಿ, ನಿವೃತ್ತಿ ವೇತನ ಸಂದಾಯದ ಪತ್ರ, ಬಿಡುಗಡೆ ಪುಸ್ತಕ ಮತ್ತು ಪದವಿ ಪ್ರಮಾಣ ಪತ್ರ) |
| ಯೋಜನೆಗಳಿಂದ ನಿರಾಶ್ರಿತರಾದ ಅಭ್ಯರ್ಥಿ (PDP) | ಸರ್ಕಾರಿ ಆದೇಶ ಸಂಖ್ಯೆ:ಸಿಆಸುಇ 252 ಸೇನೆನಿ 2020 (ಭಾ-1) ದಿನಾಂಕ:07-07-2021 ರನ್ವಯ ಯೋಜನೆಗಳಿಂದ ನಿರ್ವಸಿತರಾದ (ಆದರೆ ಈ ನಿಯಮವು ದಿನಾಂಕ:23.11.2020 ರಿಂದ ಜಾರಿಗೆ ಬರುವಂತೆ 25 ವರ್ಷಕ್ಕೆ ಮುನ್ನ ನಿರ್ವಸಿತರಾದ ಕುಟುಂಬ ಅಭ್ಯರ್ಥಿಗಳಿಗೆ ಈ ಮೀಸಲಾತಿ ಅನ್ವಯಿಸುವುದಿಲ್ಲ) ಕುಟುಂಬದ ಅಭ್ಯರ್ಥಿಗಳಿಗೆ ಮೀಸಲಿರಿಸಿದ ಹುದ್ದೆಗಳಿಗೆ ಅರ್ಜಿ ಸಲ್ಲಿಸುವಂತಹ ಅಭ್ಯರ್ಥಿಗಳು ಸಂಬಂಧಿತ ತಹಶೀಲ್ದಾರರವರಿಂದ ನಿಗದಿತ ನಮೂನೆಯಲ್ಲಿ ಸಮರ್ಪಕವಾಗಿ ಹಾಗೂ ಸಂಪೂರ್ಣವಾಗಿ ಭರ್ತಿ ಮಾಡಿದ (ಯಾವುದಾದರೂ ಒಂದು ಐಟಂ ಗುರುತಿಸಿರುವ) ಪ್ರಮಾಣ ಪತ್ರವನ್ನು ನಿಗದಿಪಡಿಸಿದ ಕೊನೆಯ ದಿನಾಂಕದೊಳಗೆ ಪಡೆದಿರತಕ್ಕದ್ದು. ತಪ್ಪಿದ್ದಲ್ಲಿ ಅಂತಹ ಅಭ್ಯರ್ಥಿಗಳ ಮೀಸಲಾತಿಯನ್ನು ರದ್ದುಪಡಿಸಲಾಗುವುದು. (ಈ ಪ್ರಮಾಣ ಪತ್ರದ ನಮೂನೆಯನ್ನು ಅಧಿಸೂಚನೆಯ ಕೊನೆಯ ಭಾಗದಲ್ಲಿ **ಅನುಬಂಧ-ಉ** ರಲ್ಲಿ ತೋರಿಸಲಾಗಿದೆ). |
| ಇಲಾಖಾ ಅಭ್ಯರ್ಥಿಗಳು ಸಲ್ಲಿಸಬೇಕಾಗಿರುವ ನಿರಾಕ್ಷೇಪಣ ಪ್ರಮಾಣ ಪತ್ರ | ಕರ್ನಾಟಕ ರಾಜ್ಯದ ಸಾರಿಗೆ ಸಂಸ್ಥೆಗಳಲ್ಲಿ ಸೇವೆಯಲ್ಲಿರುವ ನೌಕರರು ವಯೋಮಿತಿ ಸಡಿಲಿಕೆ ಕೋರಿದ್ದಲ್ಲಿ, ಅಂತಹ ನೌಕರರು ನಿರಾಕ್ಷೇಪಣ ಪ್ರಮಾಣ ಪತ್ರವನ್ನು ನಿಗದಿಪಡಿಸಿದ ಕೊನೆಯ ದಿನಾಂಕದಂದು ಚಾಲ್ತಿಯಲ್ಲಿರುವಂತೆ ಸಕ್ಷಮ ಪ್ರಾಧಿಕಾರದಿಂದ ಪಡೆದಿರತಕ್ಕದ್ದು. ಅರ್ಹರಾದಲ್ಲಿ ಈ ಪ್ರಮಾಣ ಪತ್ರದ ಮೂಲ ಪ್ರತಿಯನ್ನು, ಮೂಲ ದಾಖಲಾತಿಗಳ ಪರಿಶೀಲನಾ ಸಮಯದಲ್ಲಿ ಕಡ್ಡಾಯವಾಗಿ ಹಾಜರುಪಡಿಸತಕ್ಕದ್ದು. ತಪ್ಪಿದ್ದಲ್ಲಿ ಈ ಸೌಲಭ್ಯವು ದೊರೆಯುವುದಿಲ್ಲ. (ಈ ಪ್ರಮಾಣ ಪತ್ರದ ನಮೂನೆಯನ್ನು ಅಧಿಸೂಚನೆಯ ಕೊನೆಯ ಭಾಗದಲ್ಲಿ **ಅನುಬಂಧ-ಊ** ರಲ್ಲಿ ತೋರಿಸಲಾಗಿದೆ). |

| | |
|---|---|
| ತೃತೀಯ ಲಿಂಗದ ಅಭ್ಯರ್ಥಿ (Transgender) | ಸರ್ಕಾರದ ಅಧಿಸೂಚನೆ ಸಂಖ್ಯೆ ಸಿಆಸುಇ 179 ಸಸೆನಿ 2020 ದಿನಾಂಕ:06-07-2021 ರಲ್ಲಿ ರಾಜ್ಯ ಸಿವಿಲ್ ಸೇವೆಗಳ ಸಮೂಹ-'ಎ', 'ಬಿ', 'ಸಿ' ಮತ್ತು 'ಡಿ 'ಗುಂಪಿನ ಹುದ್ದೆಗಳಗೆ ಸಾಮಾನ್ಯ ವರ್ಗ, ಪರಿಶಿಷ್ಟ ಜಾತಿಗಳು, ಪರಿಶಿಷ್ಟ ಪಂಗಡಗಳು ಮತ್ತು ಇತರೆ ಹಿಂದುಳಿದ ವರ್ಗಗಳ ಪ್ರತಿಯೊಂದು ಪ್ರವರ್ಗದಿಂದ ಶೇಕಡ 1 (ಒಂದರಷ್ಟು) ಹುದ್ದೆಗಳನ್ನು ತೃತೀಯ ಲಿಂಗದ ಅಭ್ಯರ್ಥಿಗಳಗೆ ಮೀಸಲಾತಿ ಕಲ್ಪಿಸಿದ್ದು, ತೃತೀಯ ಲಿಂಗದ ಅಭ್ಯರ್ಥಿಗಳಗೆ ಮೀಸಲರಿಸಿದ ಹುದ್ದೆಗಳಗೆ ಅರ್ಜಿ ಸಲ್ಲಿಸುವಂತಹ ಅಭ್ಯರ್ಥಿಗಳು ಕೇಂದ್ರ ಅಧಿನಿಯಮ ತೃತೀಯ ಲಿಂಗ ವ್ಯಕ್ತಿಗಳ (ಹಕ್ಕುಗಳ ರಕ್ಷಣೆ) 2019 ರಲ್ಲಿ ನಿಗದಿಪಡಿಸಿರುವಂತೆ ಜಿಲ್ಲಾ ಮ್ಯಾಜಿಸ್ಟ್ರೇಟ್ ರವರಿಂದ ಪ್ರಮಾಣ ಪತ್ರವನ್ನು ನಿಗದಿಪಡಿಸಿದ ಕೊನೆಯ ದಿನಾಂಕದಂದು ಚಾಲ್ತಿಯಲ್ಲಿರುವಂತೆ ಪಡೆದಿರತಕ್ಕದ್ದು. ತಪ್ಪಿದ್ದಲ್ಲಿ ಅಂತಹ ಅಭ್ಯರ್ಥಿಗಳು ಸದರಿ ಮೀಸಲಾತಿಗೆ ಅನರ್ಹರಾಗುತ್ತಾರೆ. |
| 371-ಜೆ ಸ್ಥಳೀಯ ವೃಂದ | ಕರ್ನಾಟಕ ಸಾರ್ವಜನಿಕ ಉದ್ಯೋಗ (ಹೈದ್ರಾಬಾದ್-ಕರ್ನಾಟಕ ಪ್ರದೇಶಕ್ಕೆ ನೇಮಕಾತಿಯಲ್ಲಿ ಮೀಸಲಾತಿ) ಪ್ರಮಾಣ ಪತ್ರಗಳ ವಿತರಣೆ, 2013 ರಲ್ಲಿ ಕಲ್ಯಾಣ-ಕರ್ನಾಟಕ ಪ್ರದೇಶದ (371-ಜೆ) ಮೀಸಲಾತಿಗೆ ನಿಗಧಿಪಡಿಸಿರುವ ನಮೂನೆ/ಗಳಲ್ಲಿ ಅಧಿಕೃತ ಪ್ರಾಧಿಕಾರಿಗಳಂದ ಪಡೆದ ಸಮರ್ಪಕ ಪ್ರಮಾಣ ಪತ್ರ ಹೊಂದಿರತಕ್ಕದ್ದು. ಈ ಪ್ರಮಾಣ ಪತ್ರದಲ್ಲಿ ಸಂಬಂಧಪಟ್ಟ ಎಲ್ಲಾ ಐಟಂ/ಕಲಂಗಳನ್ನು ಭರ್ತಿ ಮಾಡಿದ್ದ ಪಕ್ಷದಲ್ಲಿ ಮಾತ್ರ ಕಲ್ಯಾಣ-ಕರ್ನಾಟಕ ಪ್ರದೇಶದ ಮೀಸಲಾತಿಗೆ ಅರ್ಹರಿರುತ್ತಾರೆ. ತಪ್ಪಿದ್ದಲ್ಲಿ ಅಂತಹ ಅಭ್ಯರ್ಥಿಗಳ ಮೀಸಲಾತಿಯನ್ನು ರದ್ದುಪಡಿಸಲಾಗುವುದು. (ಈ ಪ್ರಮಾಣ ಪತ್ರದ ನಮೂನೆಯನ್ನು ಅಧಿಸೂಚನೆಯ ಕೊನೆಯ ಭಾಗದಲ್ಲಿ **ಅನುಬಂಧ-ಖ ಮತ್ತು ಖ-1** ರಲ್ಲಿ ತೋರಿಸಲಾಗಿದೆ). |

16. **ಬೆಂ.ಮ.ಸಾ.ಸಂಸ್ಥೆ/ಕರ್ನಾಟಕ ಪರೀಕ್ಷಾ ಪ್ರಾಧಿಕಾರದೊಡನೆ ಪತ್ರ ವ್ಯವಹಾರ:-**

16.1) ಬೆಂ.ಮ.ಸಾ.ಸಂಸ್ಥೆ ಅಥವಾ ಕರ್ನಾಟಕ ಪರೀಕ್ಷಾ ಪ್ರಾಧಿಕಾರವು ಅಭ್ಯರ್ಥಿಗಳೊಂದಿಗೆ ಯಾವುದೇ ಪತ್ರ ವ್ಯವಹಾರವನ್ನು ನಡೆಸುವುದಿಲ್ಲ. ವಿಳಾಸ/ಮೊಬೈಲ್ ಸಂಖ್ಯೆಯ ಬದಲಾವಣೆ ಇದ್ದಲ್ಲಿ ಅಭ್ಯರ್ಥಿಗಳು ಲಿಖಿತ ಮನವಿಯ ಮೂಲಕ ಸಂಸ್ಥೆಯ ಗಮನಕ್ಕೆ ತರತಕ್ಕದ್ದು. ವಿಳಾಸ/ಮೊಬೈಲ್ ಸಂಖ್ಯೆಯ ಬದಲಾವಣೆಯನ್ನು ಪರಿಗಣಿಸಲು ಸಂಸ್ಥೆಯು ಪ್ರಯತ್ನಿಸುವುದು. ಆದಾಗ್ಯೂ ಈ ವಿಚಾರದಲ್ಲಿ ಸಂಸ್ಥೆಯು/ಪ್ರಾಧಿಕಾರವು ಯಾವುದೇ ಜವಾಬ್ದಾರಿಯನ್ನು ವಹಿಸಿಕೊಳ್ಳುವುದಿಲ್ಲ.

16.2) ನೇಮಕಾತಿಯ ವಿವಿಧ ಹಂತಕ್ಕೆ ಸಂಬಂಧಪಟ್ಟ ಎಲ್ಲಾ ವಿವರಗಳನ್ನು **ಬೆಂ.ಮ.ಸಾ.ಸಂಸ್ಥೆಯ** https://mybmtc.karnataka.gov.in **ಅಥವಾ ಕರ್ನಾಟಕ ಪರೀಕ್ಷಾ ಪ್ರಾಧಿಕಾರದ ವೆಬ್‌ಸೈಟ್ http://kea.kar.nic.in ನಲ್ಲಿ** ಪಡೆಯಬಹುದಾಗಿರುತ್ತದೆ. ಆದ್ದರಿಂದ, ನೇಮಕಾತಿ ಪ್ರಕ್ರಿಯೆಗಳ ಬಗ್ಗೆ ಅಭ್ಯರ್ಥಿಗಳು ಯಾವುದೇ ರೀತಿಯ ಪತ್ರ ವ್ಯವಹಾರ ಅಥವಾ ವಿಚಾರಣೆಗಳಗೆ ಆಸ್ಪದವಿರುವುದಿಲ್ಲ.

17. **ಸೂಚನೆಗಳು:**

17.1) ಮೇಲ್ಕಂಡ ಹುದ್ದೆಗಳಗೆ ಅರ್ಜಿ ಸಲ್ಲಿಸಲು ನಿಗದಿಪಡಿಸಿದ ಕೊನೆಯ ದಿನಾಂಕದಂದು ಈ ಮೇಲಿನ ನಿಗದಿತ ಶೈಕ್ಷಣಿಕ ವಿದ್ಯಾರ್ಹತೆಯ ಪರೀಕ್ಷೆ ಬರೆದು ಫಲಿತಾಂಶಕ್ಕಾಗಿ ಕಾಯುತ್ತಿರುವ ಅಭ್ಯರ್ಥಿಗಳು ಅರ್ಜಿ ಸಲ್ಲಿಸಲು ಅರ್ಹರಾಗಿರುವುದಿಲ್ಲ.

17.2) **ಅರ್ಜಿ ಸಲ್ಲಿಸಲು ನಿಗದಿಪಡಿಸಿರುವ ಕೊನೆಯ ದಿನಾಂಕದಂದು ಅಧಿಸೂಚನೆಯಲ್ಲಿ ಸೂಚಿಸಿರುವ ವಿದ್ಯಾರ್ಹತೆ ಹಾಗೂ ಇತರೆ ಅರ್ಹತೆಗಳನ್ನು ಅಭ್ಯರ್ಥಿಗಳು ಕಡ್ಡಾಯವಾಗಿ ಹೊಂದಿರತಕ್ಕದ್ದು.**

17.3) **ಹುದ್ದೆಗೆ ನಿಗದಿಪಡಿಸಿದ ವಿದ್ಯಾರ್ಹತೆಯ ಪ್ರಮಾಣ ಪತ್ರ, ವಯೋಮಿತಿಗೆ ಸಂಬಂಧಿಸಿದಂತೆ ಪ್ರಮಾಣ ಪತ್ರ, ಹಾಗೂ ಮೇಲ್ಕಂಡ ಮೀಸಲಾತಿಗಳನ್ನು ಬಯಸುವ ಎಲ್ಲಾ ಅಭ್ಯರ್ಥಿಗಳು ಸಂಬಂಧಿಸಿದ ಪ್ರಮಾಣ ಪತ್ರಗಳನ್ನು ಅರ್ಜಿ ಸಲ್ಲಿಸಲು ನಿಗದಿಪಡಿಸಿದ ಕೊನೆಯ ದಿನಾಂಕದಂದು ಚಾಲ್ತಿಯಲ್ಲಿರುವಂತೆ ಪಡೆದಿರತಕ್ಕದ್ದು.**

17.4) ಅಭ್ಯರ್ಥಿಗಳು ಬಯಸುವ ವಿವಿಧ ಮೀಸಲಾತಿಗಳಿಗೆ ಸಂಬಂಧಿಸಿದಂತೆ ಎಲ್ಲಾ ಪ್ರಮಾಣ ಪತ್ರಗಳನ್ನು ಪಡೆದಿರತಕ್ಕದ್ದು, ಸಂಸ್ಥೆಯು ಸೂಚಿಸಿದಾಗ ಹಾಗೂ ಮೂಲ ದಾಖಲೆಗಳ ಪರಿಶೀಲನಾ ಸಮಯದಲ್ಲಿ ಹಾಜರುಪಡಿಸತಕ್ಕದ್ದು. ತಪ್ಪಿದ್ದಲ್ಲಿ ಅಂತಹ ಮೀಸಲಾತಿಗಳನ್ನು ತಿರಸ್ಕರಿಸಲಾಗುವುದು.

17.5) ಮೀಸಲಾತಿ ಪ್ರಮಾಣ ಪತ್ರಗಳ ನಮೂನೆಗಳನ್ನು ಅಧಿಸೂಚನೆಯ ಕೊನೆಯ ಭಾಗದಲ್ಲಿ ಅನುಬಂಧಗಳಲ್ಲಿ ತೋರಿಸಲಾಗಿದೆ.

17.6) ನಿಗದಿತ ನಮೂನೆಗಳನ್ನು ಹೊರತುಪಡಿಸಿ, ಇತರೆ ನಮೂನೆಗಳಲ್ಲಿ ಸಲ್ಲಿಸಲ್ಪಡುವ ಮೀಸಲಾತಿ ಪ್ರಮಾಣ ಪತ್ರಗಳನ್ನು ತಿರಸ್ಕರಿಸಲಾಗುವುದು.

17.7) ಆಯ್ಕೆಗೊಂಡು ಸೇವೆಯಲ್ಲಿ ಖಾಯಂಗೊಳ್ಳುವ ಅಭ್ಯರ್ಥಿಗಳು ಉಪಧನ ಪಾವತಿ ಕಾಯ್ದೆ 1972 ರನ್ವಯ ಉಪಧನ ಪಡೆಯಲು ಅರ್ಹರು.

17.8) ಎಸ್.ಎಸ್.ಎಲ್.ಸಿ ಪರೀಕ್ಷೆಯಲ್ಲಿ ಪ್ರಥಮ ಅಥವಾ ದ್ವಿತೀಯ ಭಾಷೆಯಾಗಿ ಕನ್ನಡವನ್ನು ಅಧ್ಯಯನ ಮಾಡದೆ ಇದ್ದಲ್ಲಿ ಆಯ್ಕೆಗೊಂಡ ಅಭ್ಯರ್ಥಿಗಳು ಸಂಸ್ಥೆಯ ವತಿಯಿಂದ ನಡೆಸುವ 'ಕನ್ನಡ ಭಾಷಾ ಜ್ಞಾನದ ಪರೀಕ್ಷೆಯಲ್ಲಿ' ಒಂದೇ ಅವಕಾಶದಲ್ಲಿ ಉತ್ತೀರ್ಣರಾಗಬೇಕು ಇಲ್ಲದಿದ್ದಲ್ಲಿ ಅವರ ಆಯ್ಕೆಯನ್ನು ರದ್ದುಗೊಳಿಸಲಾಗುವುದು.

17.9) ಅರ್ಜಿಯಲ್ಲಿ ತಪ್ಪು / ಸುಳ್ಳು ಮಾಹಿತಿ ಅಥವಾ ನಕಲಿ ಪ್ರಮಾಣ ಪತ್ರ/ದಾಖಲಾತಿಗಳನ್ನು ಸಲ್ಲಿಸಿ ನೌಕರಿ ಪಡೆದಿರುವುದು ಯಾವುದೇ ಸಂದರ್ಭದಲ್ಲಿ ಕಂಡುಬಂದಲ್ಲಿ ಅವರನ್ನು ಯಾವುದೇ ಮುನ್ಸೂಚನೆ ನೀಡದೇ ಯಾವುದೇ ಸಮಯದಲ್ಲಾದರೂ ಕೆಲಸದಿಂದ ತೆಗೆದುಹಾಕಲಾಗುವುದು ಅಥವಾ ವಜಾ ಮಾಡುವುದರ ಜೊತೆಗೆ ಅವರ ವಿರುದ್ಧ ಕಾನೂನು ರೀತಿಯ ಕ್ರಮ ತೆಗೆದುಕೊಳ್ಳಲಾಗುವುದು.

17.10) ನೈತಿಕ ದುರ್ನಡತೆಯಿಂದಾಗಿ / ನೀತಿಬಾಹಿರ ಚಟುವಟಿಕೆಗಳಿಂದಾಗಿ ನ್ಯಾಯಾಲಯದಿಂದ ಶಿಕ್ಷೆಗೊಳಪಟ್ಟಿರುವ ವ್ಯಕ್ತಿ ಅಥವಾ ಈ ಸಂಸ್ಥೆಯಲ್ಲಿ ಅಥವಾ ರಾಜ್ಯ / ಕೇಂದ್ರ / ಸ್ಥಳೀಯ ಸಂಸ್ಥೆ / ಕೈಗಾರಿಕಾ / ವಾಣಿಜ್ಯಕ್ಕೆ ಸಂಬಂಧಪಟ್ಟ ಅಥವಾ ರಾಜ್ಯ ಸಾರಿಗೆ ಅಧೀನದಲ್ಲಿರುವ ಕಛೇರಿಗಳಲ್ಲಿ ನೈತಿಕ ದುರ್ನಡತೆಯಿಂದಾಗಿ / ನೀತಿ ಬಾಹಿರ ಚಟುವಟಿಕೆಗಳಲ್ಲಿ ಒಳಗಾಗಿ ಅಥವಾ ಈ ಹಿಂದೆ ರಾಜ್ಯದ ಯಾವುದೇ ಸಾರಿಗೆ ಸಂಸ್ಥೆಗಳಲ್ಲಿ ಕಾರ್ಯ ನಿರ್ವಹಿಸುತ್ತಿದ್ದ ಸಂದರ್ಭದಲ್ಲಿ ಕಾನೂನು / ನೀತಿ ಬಾಹಿರ ಚಟುವಟಿಕೆಗಳಲ್ಲಿ ತೊಡಗಿ ಸೇವೆಯಿಂದ ತೆಗೆದು ಹಾಕಿದ್ದಲ್ಲಿ / ವಜಾ ಮಾಡಲ್ಪಟ್ಟಿದ್ದಲ್ಲಿ ನೇಮಕಾತಿಗೆ ಅನರ್ಹರಾಗಿರುತ್ತಾರೆ.

17.11) ಅಭ್ಯರ್ಥಿಯು ಸಾರ್ವಜನಿಕ ಉದ್ದಿಮೆ ಅಥವಾ ಕರ್ನಾಟಕ ಸರ್ಕಾರ ಅಥವಾ ಕೇಂದ್ರ ಸರ್ಕಾರದಲ್ಲಿ ಕೆಲಸ ನಿರ್ವಹಿಸುತ್ತಿದ್ದಲ್ಲಿ ಅಂತಹ ಅಭ್ಯರ್ಥಿಯು ಸೂಕ್ತ ಪ್ರಾಧಿಕಾರಸ್ಥರಿಂದ ಈ ಸಂಸ್ಥೆಗೆ ಅರ್ಜಿ ಸಲ್ಲಿಸಲು ಆಕ್ಷೇಪಣೆ ಇಲ್ಲವೆಂಬ ಬಗ್ಗೆ ನಿರಾಕ್ಷೇಪಣ ಪತ್ರವನ್ನು ಹಾಜರುಪಡಿಸತಕ್ಕದ್ದು.

17.12) ಅಧಿಸೂಚನೆಯಲ್ಲಿನ ವಿವರಗಳಿಗೆ ಸಂಬಂಧಿಸಿದಂತೆ ಸರ್ಕಾರ/ ಸಂಸ್ಥೆಯಿಂದ ಯಾವುದಾರೂ ತಿದ್ದುಪಡಿ/ಬದಲಾವಣೆ ಸ್ವೀಕೃತವಾದಲ್ಲಿ ಅದರಂತೆ ತಿದ್ದುಪಡಿಗಳನ್ನು ನಂತರದಲ್ಲಿ ಪ್ರಕಟಿಸಲಾಗುವುದು.

**18. ಅಭ್ಯರ್ಥಿಗಳಿಗೆ ವಿಶೇಷ ಸೂಚನೆಗಳು:**

18.1) ಕೇವಲ ಆನ್‌ಲೈನ್ ಮೂಲಕ ಅರ್ಜಿ ಸಲ್ಲಿಸುವುದು, ಸಾಮಾನ್ಯ ಸಾಮರ್ಥ್ಯ ಪರೀಕ್ಷೆಗೆ ಹಾಜರಾಗುವುದು ಮತ್ತು ಪರೀಕ್ಷೆಯಲ್ಲಿ ಅರ್ಹತೆ ಪಡೆದ ಮಾತ್ರಕ್ಕೆ ಅಭ್ಯರ್ಥಿಗಳು ಈ ಮೇಲಿನ ಹುದ್ದೆಯ ನೇಮಕಾತಿಗೆ ಯಾವುದೇ ಹಕ್ಕನ್ನು ಹೊಂದುವುದಿಲ್ಲ, ನೇಮಕಾತಿಯು ಸಂಸ್ಥೆಯು ನಿಗಧಿಪಡಿಸಬಹುದಾದ ಅರ್ಹತಾ ಮಾನದಂಡಗಳಿಗೆ ಒಳಪಟ್ಟಿರುತ್ತದೆ.

18.2) ಮೇಲಿನ ಯಾವುದೇ ನಿಯಮಗಳು / ಕಾರ್ಯವಿಧಾನಗಳಿಗೆ ಸಂಬಂಧಿಸಿದಂತೆ ವ್ಯತ್ಯಾಸ ಅಥವಾ ಅಸ್ಪಷ್ಟತೆ ಕಂಡು ಬಂದಲ್ಲಿ, ಸಂಸ್ಥೆಯ ಪದವೃಂದ ಮತ್ತು ನೇಮಕಾತಿ ನಿಯಮಾವಳಿಗಳು 1982, ತತ್ಸಂಬಂಧ ಹೊರಡಿಸಿರುವ ತಿದ್ದುಪಡಿಗಳು ಹಾಗೂ ಚಾಲ್ತಿಯಲ್ಲಿರುವ ಇತರೆ ನಿಯಮಗಳು ಅನ್ವಯಿಸುತ್ತವೆ.

18.3) ಅಭ್ಯರ್ಥಿಯು ನಕಲಿ ವ್ಯಕ್ತಿಯಾಗಿರುವನೆಂದು ಅಥವಾ ಖೋಟಾ ದಸ್ತಾವೇಜು ಅಥವಾ ತಿದ್ದಲಾದ ದಸ್ತಾವೇಜುಗಳನ್ನು ಸಲ್ಲಿಸಿರುವನೆಂದು ಅಥವಾ ತಪ್ಪು ಅಥವಾ ಸುಳ್ಳು ಹೇಳಿಕೆ ನೀಡಿರುವನೆಂದು ಅಥವಾ ವಾಸ್ತವಿಕ ಮಾಹಿತಿಯನ್ನು ಮರೆಮಾಚಿರುವನೆಂದು ಅಥವಾ ನೇಮಕಾತಿ ಉದ್ದೇಶಗಳಿಗಾಗಿ ನಡೆಸಲಾದ ಪರೀಕ್ಷೆಯಲ್ಲಿ / ಸಂದರ್ಶನದಲ್ಲಿ ಅನುಚಿತ ಮಾರ್ಗವನ್ನು ಅನುಸರಿಸುತ್ತಿರುವನೆಂದು ಅಥವಾ ಅನುಸರಿಸಲು ಪ್ರಯತ್ನಿಸಿರುವನೆಂದು ಅಥವಾ ಅವರ ನೇಮಕಾತಿಯ ಸಂಬಂಧದಲ್ಲಿ ಯಾವುದೇ ಇತರೆ ಅಕ್ರಮ ಮತ್ತು ಅನುಚಿತ ಮಾರ್ಗವನ್ನು ಅವಲಂಬಿಸಿರುವನೆಂದು, ಕಂಡುಬಂದಲ್ಲಿ ಅವನು / ಅವಳು ಸ್ವತ: ಕ್ರಿಮಿನಲ್ ವ್ಯವಹರಣೆಗಳಿಗೆ ಮತ್ತು ಶಿಸ್ತು ಕ್ರಮಕ್ಕೆ ಒಳಪಡುವುದಲ್ಲದೆ; ಹುದ್ದೆಯ ಆಯ್ಕೆಯಿಂದ ಅಭ್ಯರ್ಥನವನ್ನು ರದ್ದುಪಡಿಸಲಾಗುವುದು.

18.4) ಅಭ್ಯರ್ಥಿಗಳ ಆಯ್ಕೆಯು ಸಂಪೂರ್ಣವಾಗಿ ಪಾರದರ್ಶಕವಾಗಿರುವುದರಿಂದ ಯಾವುದೇ ಅಕ್ರಮ ಮತ್ತು ಅನುಚಿತ ಹಸ್ತಕ್ಷೇಪಗಳಿಗೆ ಅವಕಾಶವಿರುವುದಿಲ್ಲ. ಆದ್ದರಿಂದ ಅಭ್ಯರ್ಥಿಗಳು ಈ ಬಗ್ಗೆ ಯಾವುದೇ ಮಧ್ಯವರ್ತಿಗಳ ಆಸೆ, ಆಮಿಷ, ಪ್ರಲೋಭನೆಗಳಿಗೆ ಒಳಗಾಗಬಾರದೆಂದು ಸ್ಪಷ್ಟಪಡಿಸಿದೆ. ಆದ್ದರಿಂದ ಬೆಂ.ಮ.ಸಾ.ಸಂಸ್ಥೆ ಅಥವಾ ಕರ್ನಾಟಕ ಪರೀಕ್ಷಾ ಪ್ರಾಧಿಕಾರದ ವೆಬ್‌ಸೈಟ್‌ನ್ನು ನೋಡಿಕೊಳ್ಳತಕ್ಕದ್ದು.

**19. ಅಧಿಸೂಚನೆಯಲ್ಲಿ ತಿಳಿಸಿರುವ ಹುದ್ದೆಗಳ ಮೀಸಲಾತಿಗೆ ಸಂಬಂಧಿಸಿದ ಅಂಕಣದಲ್ಲಿ ಉಪಯೋಗಿಸಿದ ಪದಗಳ ಅರ್ಥವನ್ನು ಈ ಕೆಳಕಂಡಂತೆ ಅರ್ಥೈಸಿಕೊಳ್ಳಬೇಕು:–**

| ವರ್ಗದ ಸಂಕ್ಷಿಪ್ತ ಪದ | ಪೂರ್ಣ ರೂಪ |
|---|---|
| ಸಾ.ಅ | ಸಾಮಾನ್ಯ ಅರ್ಹತೆ |
| ಪ.ಜಾ | ಪರಿಶಿಷ್ಟ ಜಾತಿ |
| ಪ.ಪಂ | ಪರಿಶಿಷ್ಟ ಪಂಗಡ |
| ಪ್ರ–1 | ಪ್ರವರ್ಗ–1 |
| 2ಎ | ಪ್ರವರ್ಗ–2ಎ |
| 2ಬಿ | ಪ್ರವರ್ಗ–2ಬಿ |
| 3ಎ | ಪ್ರವರ್ಗ–3ಎ |
| 3ಬಿ | ಪ್ರವರ್ಗ–3ಬಿ |
| ಮಾ.ಸೈ | ಮಾಜಿ ಸೈನಿಕ |
| ಗ್ರಾ.ಅ | ಗ್ರಾಮೀಣ ಅಭ್ಯರ್ಥಿ |
| ಕ.ಮಾ.ಅ | ಕನ್ನಡ ಮಾಧ್ಯಮ ಅಭ್ಯರ್ಥಿ |
| ಯೋ.ನಿ.ಅ | ಯೋಜನಾ ನಿರಾಶ್ರಿತ ಅಭ್ಯರ್ಥಿ |
| ತೃ.ಲಿ | ತೃತೀಯ ಲಿಂಗ |
| ಮ.ಅ | ಮಹಿಳಾ ಮೀಸಲು ಅಭ್ಯರ್ಥಿ |

| Reservation Abbreviation | Full Form |
|---|---|
| G.M. | General Merit |
| SC | Schedule Caste |
| ST | Schedule Tribe |
| Cat–1 | Category-1 |
| 2A | Category-2A |
| 2B | Category-2B |
| 3A | Category-3A |
| 3B | Category-3B |
| Ex-Ser | Ex-Servicemen |
| R.C. | Rural Candidate |
| K.M.S | Kannada Medium Student |
| PDP | Project Displaced Person |
| TG | Transgender |
| Wom | Women Reservation |

ಸಹಿ/–

ಕಾರ್ಯನಿರ್ವಾಹಕ ನಿರ್ದೇಶಕರು

ಕರ್ನಾಟಕ ಪರೀಕ್ಷಾ ಪ್ರಾಧಿಕಾರ

## ನಮೂನೆಗಳು

**ಅನುಬಂಧ–ಅ**

## ನಮೂನೆ - ಡಿ

### (ಪ.ಜಾ / ಪ.ಪಂ ಕ್ಕೆ ಸೇರಿದ ಅಭ್ಯರ್ಥಿಗಳಿಗೆ ಮಾತ್ರ)

(ನಿಯಮ 3ಎ (2) (3) ನೋಡಿ)ಅನುಸೂಚಿತ ಜಾತಿ ಅಥವಾ ಅನುಸೂಚಿತ ಬುಡಕಟ್ಟುಗಳಿಗೆ (ಪ.ಜಾ/ಪ.ಪಂ) ಸೇರಿದ ಅಭ್ಯರ್ಥಿಗಳಿಗೆ ನೀಡುವ ಪ್ರಮಾಣ ಪತ್ರ ............................................................ ರಾಜ್ಯದ / ಕೇಂದ್ರಾಡಳಿತ ಪ್ರದೇಶದ * ................................. ಜಿಲ್ಲೆಯ / ವಿಭಾಗದ ................................................. ಗ್ರಾಮ / ಪಟ್ಟಣದ * ನಿವಾಸಿಯಾದ ಶ್ರೀ / ಶ್ರೀಮತಿ.............................. ಎಂಬುವವರ ಮಗ / ಮಗಳಾದ ಶ್ರೀ / ಶ್ರೀಮತಿ .................................. ಇವರು ಅನುಸೂಚಿತ ಜಾತಿ/ಅನುಸೂಚಿತ ಬುಡಕಟ್ಟು * ಎಂದು ಮಾನ್ಯ ಮಾಡಲಾಗಿರುವ ಜಾತಿ/ಬುಡಕಟ್ಟಿಗೆ * ಸೇರಿರುತ್ತಾರೆಂದು ಪ್ರಮಾಣೀಕರಿಸಿದೆ.

- ಸಂವಿಧಾನ (ಅನುಸೂಚಿತ ಜಾತಿಗಳು) ಆದೇಶ, 1950
- ಸಂವಿಧಾನ (ಅನುಸೂಚಿತ ಬುಡಕಟ್ಟುಗಳು) ಆದೇಶ, 1950
- ಸಂವಿಧಾನ (ಅನುಸೂಚಿತ ಜಾತಿ) (ಕೇಂದ್ರಾಡಳಿತ ಪ್ರದೇಶಗಳು) ಆದೇಶ, 1950
- ಸಂವಿಧಾನ (ಅನುಸೂಚಿತ ಬುಡಕಟ್ಟುಗಳು) (ಕೇಂದ್ರಾಡಳಿತ ಪ್ರದೇಶಗಳು) ಆದೇಶ, 1951

(ಅನುಸೂಚಿತ ಜಾತಿ ಮತ್ತು ಅನುಸೂಚಿತ ಬುಡಕಟ್ಟುಗಳ ಪಟ್ಟಿ (ಮಾರ್ಪಾಡು) ಆದೇಶ 1956, ಮುಂಬು ತಾಜ್ಯ ಪುನರ್ ರಚನಾ ಅಧಿನಿಯಮ, 1960, ಪಂಜಾಬ್ ರಾಜ್ಯ ಪುನರ್ ರಚನಾ ಅಧಿನಿಯಮ, 1966, ಹಿಮಾಚಲ ಪ್ರದೇಶ ರಾಜ್ಯ ಅಧಿನಿಯಮ, 1970 ಮತ್ತು ಈಶಾನ್ಯ ಪ್ರದೇಶಗಳ (ಪುನರ್ ರಚನಾ ಅಧಿನಿಯಮ, 1971ರ ಮೂಲ ತಿದ್ದುಪಡಿಯಾದಂತೆ)

- ಸಂವಿಧಾನ
- ಸಂವಿಧಾನ (ಜಮ್ಮು ಮತ್ತು ಕಾಶ್ಮೀರ) ಅನುಸೂಚಿತ ಜಾತಿಗಳ ಆದೇಶ, 1956
- ಅನುಸೂಚಿತ ಜಾತಿ ಮತ್ತು ಅನುಸೂಚಿತ ಬುಡಕಟ್ಟುಗಳ (ತಿದ್ದುಪಡಿ) ಅಧಿನಿಯಮ, 1976ರ ಮೂಲಕ ತಿದ್ದುಪಡಿಯಾದಂತೆ

ಸಂವಿಧಾನ (ಅಂಡಮಾನ್ ಮತ್ತು ನಿಕೋಬಾರ್ ದ್ವೀಪಗಳ) ಅನುಸೂಚಿತ ಬುಡಕಟ್ಟುಗಳ ಆದೇಶ, 1959.

- ಸಂವಿಧಾನ (ದಾದರ್ ಮತ್ತು ನಾಗರಹವೇಲಿ) ಅನುಸೂಚಿತ ಜಾತಿಗಳ ಆದೇಶ 1962
- ಸಂವಿಧಾನ (ಪಾಂಡಿಚೇರಿ) ಅನುಸೂಚಿತ ಜಾತಿಗಳ ಆದೇಶ, 1964
- ಸಂವಿಧಾನ (ಅನುಸೂಚಿತ ಬುಡಕಟ್ಟುಗಳು) (ಉತ್ತರ ಪ್ರದೇಶ) ಆದೇಶ, 1967
- ಸಂವಿಧಾನ (ಗೋವಾ, ದಮನ್ ಮತ್ತು ದೀವ್) ಅನುಸೂಚಿತ ಜಾತಿ/ಬುಡಕಟ್ಟುಗಳ ಆದೇಶ 1988
- ಸಂವಿಧಾನ (ನಾಗಾಲ್ಯಾಂಡ್) ಅನುಸೂಚಿತ ಬುಡಕಟ್ಟುಗಳ ಆದೇಶ

2. ಶ್ರೀ/ಶ್ರೀಮತಿ/ಕುಮಾರಿ * ............................................................ ಮತ್ತು / ಅಥವಾ ಅವನ* / ಅವಳ* ಕುಟುಂಬವು ..........................................................................................ರಾಜ್ಯ / ಕೇಂದ್ರಾಡಳಿತ ಪ್ರದೇಶದ ................................................................... ಜಿಲ್ಲಾ / ವಿಭಾಗದ ..........................................ಗ್ರಾಮ / ಪಟ್ಟಣದ ಸಾಮಾನ್ಯ ನಿವಾಸಿ (ಗಳು)

ಸಹಿ.........................................................

ತಹಶೀಲ್ದಾರ್.............................................

ಸ್ಥಳ : ಪದನಾಮ

ದಿನಾಂಕ: ಕಛೇರಿಯ ಮೊಹರಿನೊಂದಿಗೆ

ರಾಜ್ಯ / ಕೇಂದ್ರಾಡಳಿತ ಪ್ರದೇಶ *

* ಅನ್ವಯವಾಗದಿರುವ ಪದಗಳನ್ನು ದಯಪಿಟ್ಟು ಬಿಟ್ಟು ಬಿಡಿ / ಹೊಡೆದು ಹಾಕಿ

ಸೂಚನೆ: ಇಲ್ಲಿ ಉಪಯೋಗಿಸಿದ 'ಸಾಮಾನ್ಯ ನಿವಾಸಿಗಳು' ಎಂಬ ಪದಾವಳಿಯು ಪ್ರಜಾ ಪ್ರಾತಿನಿಧ್ಯ ಅಧಿನಿಯಮ, 1950ರ 20ನೇ ಪ್ರಕರಣದಲ್ಲಿರುವ ಅರ್ಥವನ್ನೇ ಹೊಂದಿರುತ್ತದೆ.ಭಾರತ ಸರ್ಕಾರದ ಪತ್ರ ಸಂಖ್ಯೆ: ಬಿಸಿ 12028/2/76-ಎಸ್‌ಸಿಟಿ-1 ಗೃಹ ಮಂತ್ರಾಲಯ ಅನುಸಾರವಾಗಿ, ಅಂಥ ಪ್ರಮಾಣ ಪತ್ರಗಳನ್ನು ನೀಡಲು ಸಕ್ಷಮವಾಗಿರುವುದಕ್ಕಾಗಿ, ಭಾರತ ಸರ್ಕಾರದ (ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ) ಪತ್ರ ಸಂಖ್ಯೆ:13-2-74 ಇಎಸ್‌ಟಿ (ಎಸ್‌ಸಿಟಿ) ದಿನಾಂಕ: 05.08.1975ರಲ್ಲಿ ನಮೂದಿಸಿದ ಪ್ರಾಧಿಕಾರಿಯು, ರಾಷ್ಟ್ರಪತಿಗಳು ಸಂಬಂಧಪಟ್ಟ ಆದೇಶದ ಅಧಿಸೂಚನೆಯನ್ನು ಹೊರಡಿಸಿದ ಸಮಯದಲ್ಲಿ ಪ್ರಮಾಣ ಪತ್ರಕ್ಕಾಗಿ ಅರ್ಜಿ ಸಲ್ಲಿಸಿದ ವ್ಯಕ್ತಿಯು, ತನ್ನ ಖಾಯಂ ವಾಸ ಸ್ಥಳವನ್ನು ಹೊಂದಿದ್ದ ಸ್ಥಳಕ್ಕೆ ಸೇರಿದವರೊಬ್ಬರಾಗಿರ ತಕ್ಕದ್ದು. ಅದೇ ರೀತಿಯಲ್ಲಿ ಒಂದು ತಾಲ್ಲೂಕಿನ ರೆವಿನ್ಯೂ ಪ್ರಾಧಿಕಾರಿಯು ಇನ್ನೊಂದು ತಾಲ್ಲೂಕಿಗೆ ಸೇರಿದ ವ್ಯಕ್ತಿಗಳಿಗೆ ಸಂಬಂಧಪಟ್ಟ ಪ್ರಮಾಣ ಪತ್ರವನ್ನು ನೀಡಲು ಸಕ್ಷಮ ಪ್ರಾಧಿಕಾರಿಯಾಗುವುದಿಲ್ಲ.

**ಅನುಬಂಧ–ಅ(1)**

**(ಪ್ರವರ್ಗ-1 ಕ್ಕೆ ಸೇರಿದ ಅಭ್ಯರ್ಥಿಗಳಿಗೆ ಮಾತ್ರ)**

**ನಮೂನೆ - ಇ**

**(ನಿಯಮ 3ಎ (2) (3) ನೋಡಿ)**

**ಹಿಂದುಳಿದ ವರ್ಗಗಳಿಗೆ (ಪ್ರವರ್ಗ-1) ಸೇರಿದ ಅಭ್ಯರ್ಥಿಗಳಿಗೆ ನೀಡುವ ಪ್ರಮಾಣ ಪತ್ರ**

.......................................................................................................................................
.........................................ಗ್ರಾಮ / ಪಟ್ಟಣದ / ನಗರ ನಿವಾಸಿಯಾದ ಶ್ರೀ /
ಶ್ರೀಮತಿ......................................................................................
......................................... ......ಇವರ ಮಗ / ಮಗಳು / ಪತ್ನಿ / ಪತಿಯಾದ ಶ್ರೀ /
ಶ್ರೀಮತಿ................................................ ....................................................................ಇವರು
ಹಿಂದುಳಿದ ವರ್ಗಗಳ (ಪ್ರವರ್ಗ) .......................................ಜಾತಿಯ .......................................ಉಪ
ಜಾತಿಗೆ ಸೇರಿರುತ್ತಾರೆಂದು ಪ್ರಮಾಣೀಕರಿಸಲಾಗಿದೆ.

ಸ್ಥಳ : ತಹಶೀಲ್ದಾರ್

ದಿನಾಂಕ : ................................ತಾಲ್ಲೂಕು

ಕಛೇರಿಯ ಮೊಹರು

**ಅನುಬಂಧ–ಅ(2)**

**(ಪ್ರವರ್ಗ - 2ಎ, 2ಬಿ, 3ಎ, 3ಬಿ ಗೆ ಸೇರಿದ ಅಭ್ಯರ್ಥಿಗಳಿಗೆ ಮಾತ್ರ)**

**ನಮೂನೆ - ಎಫ್**

**(ನಿಯಮ 3ಎ (2) (3)ನ್ನು ನೋಡಿ)**

**ಹಿಂದುಳಿದ ವರ್ಗಗಳಿಗೆ (2ಎ, 2ಬಿ. 3ಎ, 3ಬಿ) ಸೇರಿದ ಅಭ್ಯರ್ಥಿಗೆ ನೀಡುವ ಆದಾಯ ಮತ್ತು ಜಾತಿ ಪ್ರಮಾಣ ಪತ್ರ**

.............................................. ರಲ್ಲಿ ವಾಸವಾಗಿರುವ ಶ್ರೀ / ಶ್ರೀಮತಿ ............................................................. ಇವರ ಮಗ / ಮಗಳು / ಪತಿ / ಪತ್ನಿಯಾದ ಶ್ರೀ / ಶ್ರೀಮತಿ / ಕುಮಾರಿ ...................................................... ಇವರು ಮತ್ತು ಆತನ / ಅವಳ ತಂದೆ / ತಾಯಿ / ಪೋಷಕರು / ಪತ್ನಿ / ಪತಿಯು, ಸರ್ಕಾರಿ ಆದೇಶಗಳ ಸಂಖ್ಯೆ:ಎಸ್‌ಡಬ್ಲ್ಯೂಡಿ 225 ಬಿಸಿಎ 2000 ದಿನಾಂಕ: 30.03.2002 ರಲ್ಲಿ ನಿರ್ದಿಷ್ಟಪಡಿಸಿದ ಮೇಲುಸ್ತರದ (ಕ್ರೀಮಿಲೇಯರ್) ವ್ಯಾಪ್ತಿಯಲ್ಲಿ ಬರುವುದಿಲ್ಲವೆಂದು;

ಅಭ್ಯರ್ಥಿಯಾಗಲಿ ಅಥವಾ ಆತನ / ಆಕೆಯ ತಂದೆ ತಾಯಿ / ಪೋಷಕರಾಗಲಿ / ಪತ್ನಿ / ಪತಿಯಾಗಲಿ, ಸರ್ಕಾರದ ಸೇವೆಯಲ್ಲಿ 1 ನೇ ದರ್ಜೆಯ ಅಥವಾ 2ನೇ ದರ್ಜೆಯ ಅಧಿಕಾರಿಯಾಗಿಲ್ಲವೆಂದು;

ಅಥವಾ

ಸಾರ್ವಜನಿಕ ವಲಯ ಉದ್ಯಮದಲ್ಲಿ ತತ್ಸಮಾನವಾದ ಹುದ್ದೆಯನ್ನು ಹೊಂದಿರುವುದಿಲ್ಲ;

ಅಥವಾ

ಖಾಸಗಿ ನಿಯೋಜಕರ ಕೈಕೆಳಗೆ, 2ನೇ ದರ್ಜೆಯ ಅಧಿಕಾರಿಯ ಸಂಬಳಕ್ಕಿಂತ (ವೇತನ ಶ್ರೇಣಿ ರೂ. 43100-83900/-) ಕಡಿಮೆಯಲ್ಲದ ಸಂಬಳವನ್ನು ಪಡೆಯುವ ನೌಕರನಾಗಿಲ್ಲವೆಂದು;

ಅಥವಾ

ಆತನ /ಅಕೆಯ ತಂದೆ ತಾಯಿ/ ಪೋಷಕರು /ಪತ್ನಿ /ಪತಿಯ ಆದಾಯವು 8 ಲಕ್ಷ ರೂಪಾಯಿಗಳಿಗಿಂತ ಮೀರುವುದಿಲ್ಲವೆಂದು (ಸರ್ಕಾರದ ಆದೇಶ ಸಂಖ್ಯೆ: ಹಿಂವಕ 304 ಬಿಸಿಎ 2017 ಬೆಂಗಳೂರು, ದಿ: 14-09-2018);ಅಥವಾ ಕರ್ನಾಟಕ ಭೂ ಸುಧಾರಣಾ ಅಧಿನಿಯಮ 1961 ರಲ್ಲಿ ನಿಗದಿಪಡಿಸಿರುವಂತೆ ಆತನ / ಆಕೆಯ ತಂದೆ ತಾಯಿ/ ಪೋಷಕರು / ಪತ್ನಿ / ಪತಿಯು ಮಾರಾಟ ತೆರಿಗೆದಾರನಲ್ಲ ಅಥವಾ ಆತನ / ಆಕೆಯ ತಂದೆ ತಾಯಿ / ಪೋಷಕ / ಪತ್ನಿ / ಪತಿಯು ಅಥವಾ ಇವರಿಬ್ಬರೂ 10 ಯುನಿಟ್‌ಗಿಂತ ಹೆಚ್ಚಿನ ಕೃಷಿ ಭೂಮಿ ಅಥವಾ 20 ಎಕರೆಗಳಿಗಿಂತ ಹೆಚ್ಚಿನ ಪ್ಲಾಂಟೇಶನ್ ಭೂಮಿಯನ್ನು ಹೊಂದಿರುವುದಿಲ್ಲವೆಂದು ಪ್ರಮಾಣೀಕರಿಸಲಾಗಿದೆ.

ಶ್ರೀ/ಶ್ರೀಮತಿ/ಕುಮಾರಿ..................................................ಇವರು ............................................ ಜಾತಿಗೆ ................................................................... ಸೇರಿದ ಉಪ ಜಾತಿಯವರಾಗಿದ್ದು ಸರ್ಕಾರಿ ಆದೇಶ ಸಂಖ್ಯೆ: ಎಸ್‌ಡಬ್ಲ್ಯೂಡಿ 225 ಬಿಸಿಎ 2000 ದಿನಾಂಕ: 30.03.2002ರ ಅನ್ವಯ ಹಿಂದುಳಿದ ವರ್ಗಗಳ ಪ್ರವರ್ಗ ................................. (2ಎ, 2ಬಿ, 3ಎ, 3ಬಿ) ಕ್ಕೆ ಸೇರಿರುತ್ತಾರೆ ಮತ್ತು ಈ ಕುಟುಂಬದ ವಾರ್ಷಿಕ ಆದಾಯವು ರೂ:(ರೂ: ಮಾತ್ರ) ಎಂದು ಪ್ರಮಾಣೀಕರಿಸಲಾಗಿದೆ.

ಸ್ಥಳ :

ತಹಶೀಲ್ದಾರ್

ದಿನಾಂಕ:

........................ತಾಲ್ಲೂಕು

ಕಛೇರಿಯ ಮೊಹರು

**ಅನುಬಂಧ–ಆ**

**ನಮೂನೆ - 1**

**ಜನರಲ್ ಮೆರಿಟ್ ಅಭ್ಯರ್ಥಿಗಳು ಮೇಲುಸ್ತರಕ್ಕೆ ಸೇರಿಲ್ಲವೆಂದು, ದೃಢೀಕರಿಸಿ ಗ್ರಾಮೀಣ ಮೀಸಲಾತಿಯನ್ನು ಕೋರಲು ಸಲ್ಲಿಸಬೇಕಾದ ಪ್ರಮಾಣ ಪತ್ರ**

**(ಜನರಲ್ ಮೆರಿಟ್ ಅಭ್ಯರ್ಥಿಗಳು ಭರ್ತಿ ಮಾಡಬೇಕಾದ ನಮೂನೆ)**

ಇವರಿಗೆ:

ತಹಶೀಲ್ದಾರರು

…………………………………………ತಾಲ್ಲೂಕು

………………………………………… ಜಿಲ್ಲೆ

ಮಾನ್ಯರೆ,

ಶ್ರೀ / ಶ್ರೀಮತಿ ……………………………………………………………………………………………

ಎಂಬುವವರ ಮಗ / ಮಗಳು / ಪತಿ / ಪತ್ನಿ ……………………………………………………………… ಆದ ನಾನು ಮೇಲುಸ್ತರದಲ್ಲಿ (Creamy Layer) ಬರುವುದಿಲ್ಲವೆಂದು ನೇರ ನೇಮಕಾತಿಯಲ್ಲಿ ಗ್ರಾಮೀಣ ಅಭ್ಯರ್ಥಿ ಮೀಸಲಾತಿಯನ್ನು ಪಡೆಯುವುದಕ್ಕಾಗಿ ಪ್ರಮಾಣ ಪತ್ರವನ್ನು ಪಡೆಯಲು ತಮ್ಮಲ್ಲಿ ಈ ಕೆಳಕಂಡ ಮಾಹಿತಿಗಳನ್ನು ಒದಗಿಸುತ್ತಾ ಕೋರುತ್ತೇನೆ.

1. ಅಭ್ಯರ್ಥಿಯ ಹೆಸರು ಮತ್ತು ಉದ್ಯೋಗ :
2. ಅಭ್ಯರ್ಥಿಯ ಸ್ವಂತ ಸ್ಥಳ ಗ್ರಾಮ :
   ತಾಲ್ಲೂಕು :
   ಜಿಲ್ಲೆ:
3. ಅಭ್ಯರ್ಥಿಯು ಹುಟ್ಟಿದ ದಿನಾಂಕ ವಯಸ್ಸು ಮತ್ತು ಹುಟ್ಟಿದ ಸ್ಥಳ :
4. ಅಭ್ಯರ್ಥಿಯ ತಂದೆ/ತಾಯಿ/ಪೋಷಕರ ಪತಿಯ/ಪತ್ನಿಯ ಹೆಸರು ಮತ್ತು ಉದ್ಯೋಗ :
   (ಉದ್ಯೋಗವು ಸರ್ಕಾರಿ/ಅರೆ ಸರ್ಕಾರಿ/ಸಾರ್ವಜನಿಕ ಉದ್ಯಮ/ಖಾಸಗಿ)
5. ಅಭ್ಯರ್ಥಿಯ ಪ್ರಸ್ತುತ ವಿಳಾಸ :
   (ಸ್ಪಷ್ಟವಾಗಿ ನಮೂದಿಸುವುದು)
6. ಅಭ್ಯರ್ಥಿಯ ಖಾಯಂ ವಿಳಾಸ :
7. ಅಭ್ಯರ್ಥಿಯ ಶಾಲಾ ಶಿಕ್ಷಣದ ವ್ಯಾಸಂಗ ಮಾಡಿದ ಶಾಲೆಗಳ ವಿವರಗಳು
   ಪ್ರಾಥಮಿಕ
   ಮಾಧ್ಯಮಿಕ
   ಪ್ರೌಢ
8. ಅಭ್ಯರ್ಥಿಯ ಹಾಗೂ ಅಭ್ಯರ್ಥಿಯ ತಂದೆ/ತಾಯಿ/ಪೋಷಕರ (ತಂದೆ/ತಾಯಿ ಜೀವಂತವಿಲ್ಲದಿದ್ದರೆ) ಇವರ ಒಟ್ಟು ವಾರ್ಷಿಕ ಆದಾಯ ಎಲ್ಲಾಮೂಲಗಳಿಂದ:

` 1) ವೇತನ ಶ್ರೇಣಿ
   2) ಜಮೀನಿನ ವಿವರ
   3) ಇತರ ಮೂಲಗಳು

9. ಆದಾಯ ತೆರಿಗೆ ಪಾವತಿದಾರರೇ?
10. ಸಂಪತ್ತು ತೆರಿಗೆ ಪಾವತಿದಾರರೇ?
11. ಮಾರಾಟ ತೆರಿಗೆ ಪಾವತಿದಾರರೇ?

## ಪ್ರಮಾಣೀಕೃತ ಘೋಷಣೆ

ಈ ಮೇಲೆ ನನ್ನಿಂದ ಒದಗಿಸಿದ ಮಾಹಿತಿ / ವಿವರಣೆಯು ನಾನು ತಿಳಿದಿರುವಷ್ಟರ ಮಟ್ಟಿಗೆ ಸತ್ಯವೆಂದು ಶ್ರದ್ಧಾಪೂರ್ವಕವಾಗಿ ದೃಢೀಕರಿಸುತ್ತೇನೆ ಮತ್ತು ಘೋಸುತ್ತೇನೆ.

ಸ್ಥಳ: ತಮ್ಮ ವಿಧೇಯ

ದಿನಾಂಕ: (ಅಭ್ಯರ್ಥಿಯ ಸಹಿ)

ಮೇಲೆ ಒದಗಿಸಲಾದ ಮಾಹಿತಿಗಳು ಸತ್ಯವಾಗಿರುತ್ತದೆ ಎಂದು ಪ್ರಮಾಣಿಕರಿಸುತ್ತಾ, ಈ ಮಾಹಿತಿಗಳು ಅಸತ್ಯವೆಂದು ದೃಢಪಟ್ಟಲ್ಲಿ ಅಪರಾಧ ವಿಚಾರಣೆಗೆ ಬದ್ಧನಾಗಿರುತ್ತೇನೆ.

ಸ್ಥಳ: ತಂದೆ/ತಾಯಿ/ಪೋಷಕರ ಸಹಿ

ದಿನಾಂಕ: (ತಂದೆ/ತಾಯಿ ಜೀವಂತವಿಲ್ಲದಿದ್ದರೆ)

(ಹೆಂಡತಿ/ಗಂಡ/ಇವರ ಸಹಿ)

ಸ್ಥಳೀಯ ಇಬ್ಬರು ಸಾಕ್ಷಿದಾರರು

ಅಭ್ಯರ್ಥಿಯ ಮತ್ತು ಅವರ ತಂದೆ/ತಾಯಿ/ಪೋಷಕರು/ಪತಿ/ಪತ್ನಿ ಇವರನ್ನು ಹಾಗೂ ಇವರ ಸಹಿಯನ್ನು ಗುರುತಿಸುತ್ತೇವೆ.

ಸಾಕ್ಷಿದಾರರ ಸಹಿ 1)

(ಪೂರ್ಣ ವಿಳಾಸದೊಂದಿಗೆ) 2)

## ಪರಿಶೀಲನಾ ಪ್ರಮಾಣ ಪತ್ರ

1.ಶ್ರೀ/ಶ್ರೀಮತಿ ........................................................................................ ಎಂಬುವವರ ಮಗ/ ಮಗಳು/ ಪತಿ/ ಪತ್ನಿ ಶ್ರೀ/ಶ್ರೀಮತಿ/ಕುಮಾರಿ ............................................................ ಎಂಬುವವರು ಕರ್ನಾಟಕ ರಾಜ್ಯದ ..............................ಜಿಲ್ಲೆಯ ವಿಭಾಗ ............................................................ ಗ್ರಾಮ/ಪಟ್ಟಣ/ನಗರದಲ್ಲಿ ಸಾಮಾನ್ಯ ನಿವಾಸಿಯಾಗಿದ್ದಾರೆ ಮತ್ತು ಇವರು ಜನರಲ್ ಮೆರಿಟ್ ವರ್ಗಕ್ಕೆ ಸೇರಿದವರಾಗಿರುತ್ತಾರೆ.

2. ಶ್ರೀ/ಶ್ರೀಮತಿ/ಕುಮಾರಿ ........................................................................ ಇವರ ತಂದೆ/ತಾಯಿ/ಪೋಷಕರು ಸರ್ಕಾರಿ ಆದೇಶ ಸಂಖ್ಯೆ: ಎಸ್‌ಡಬ್ಲ್ಯೂಡಿ 251 ಬಿಸಿಎ 94, ಬೆಂಗಳೂರು, ದಿನಾಂಕ: 31.01.1995 ರನ್ವಯ ಜನರಲ್ ಮೆರಿಟ್ ವರ್ಗದ ಮೇಲುಸ್ತರದಲ್ಲಿ (Creamy Layer) ಬರುವುದಿಲ್ಲವೆಂದು ಪ್ರಮಾಣೀಕರಿಸಲಾಗಿದೆ.

ಸ್ಥಳ ತಹಶೀಲ್ದಾರ್.

.............................. ತಾಲ್ಲೂಕು,

ಬೆಂಗಳೂರು ಕಛೇರಿಯ ಮೊಹರು

**<u>ಸೂಚನೆ-1 :</u>** ಇದರಲ್ಲಿ ಉಪಯೋಗಿಸಲಾದ 'ಸಾಮಾನ್ಯ ನಿವಾಸಿ' ಎಂಬ ಪದವು 1950ರ ಜನತಾ ಪ್ರಾತಿನಿಧ್ಯ ಕಾಯ್ದೆಯ 20ನೇ ಅನುಚ್ಛೇದದಲ್ಲಿನ ಅರ್ಥವನ್ನು ಹೊಂದಿರುತ್ತದೆ.

**<u>ಸೂಚನೆ-2:</u>** ಪರಿಶೀಲನಾ ಪ್ರಮಾಣ ಪತ್ರ ನೀಡುವ ಅಧಿಕೃತ ಅಧಿಕಾರಿಯು ಸರ್ಕಾರಿ ಆದೇಶ ಸಂಖ್ಯೆ ಎಸ್‌ಡಬ್ಲ್ಯೂಡಿ 251 ಬಿಸಿಎ 94, ಬೆಂಗಳೂರು, ದಿನಾಂಕ: 31.01.1995 ರನ್ವಯ ಮೇಲುಸ್ತರ (Creamy Layer) ದವರನ್ನು ಗುರುತಿಸಲು ನಿಗದಿಪಡಿಸಲಾಗಿರುವ ಅಂಶಗಳನ್ನು ವಿವರವಾಗಿ ಖಚಿತಪಡಿಸಿಕೊಂಡ ನಂತರವೇ ಪ್ರಮಾಣ ಪತ್ರ ನೀಡತಕ್ಕದ್ದು

**ಅನುಬಂಧ–ಆ(1)**

**ನಮೂನೆ – 2**

**ಗ್ರಾಮೀಣ ಅಭ್ಯರ್ಥಿ ಪ್ರಮಾಣ ಪತ್ರ**

ಶ್ರೀ/ಶ್ರೀಮತಿ ..........................................................................................ರವರ ಮಗ/ ಮಗಳು/ ಪತಿ/ ಪತ್ನಿ/ಶ್ರೀ/ಶ್ರೀಮತಿ/ಕುಮಾರಿ...................................................................... ಜಿಲ್ಲೆ ...........................ತಾಲ್ಲೂಕು................................ ಗ್ರಾಮದಲ್ಲಿ ..................................... ವಾಸವಾಗಿರುವ ಇವರು ಒಂದನೇ ತರಗತಿಯಿಂದ .................................... ತರಗತಿಯವರೆಗೆ ................................ ಜಿಲ್ಲೆ ............................................ ತಾಲ್ಲೂಕು.......................... ಪಟ್ಟಣ........................ ಶಾಲೆಯಲ್ಲಿ ವ್ಯಾಸಂಗ ಮಾಡಿ .................. ವರ್ಷ ನಡೆದ ಪರೀಕ್ಷೆಯಲ್ಲಿ ಉತ್ತೀರ್ಣರಾಗಿರುತ್ತಾರೆ. ಈ ಶಾಲೆಯು ಅಭ್ಯರ್ಥಿಯು ವ್ಯಾಸಂಗ ಮಾಡಿದ ಅವಧಿಯಲ್ಲಿ ಕರ್ನಾಟಕ ಪೌರ ನಿಗಮಗಳ ಅಧಿನಿಯಮ, 1976 ಅಥವಾ ಕರ್ನಾಟಕ ಪೌರ ಸಭೆಗಳ ಅಧಿನಿಯಮ 1964ರ ಅಡಿಯಲ್ಲಿ ನಿರ್ದಿಷ್ಟಪಡಿಸಿ ಒಂದು ದೊಡ್ಡ ನಗರ ಪ್ರದೇಶ ಸಣ್ಣ ನಗರ ಪ್ರದೇಶ ಅಥವಾ ಪರಿವರ್ತನೆ ಹಂತದಲ್ಲಿರುವ ಪ್ರದೇಶಗಳ ಹೊರತಾದ ಪ್ರದೇಶದಲ್ಲಿತ್ತು.

ಮೇಲು ರುಜು
ಕ್ಷೇತ್ರ ಶಿಕ್ಷಣ ಅಧಿಕಾರಿ
ಕಛೇರಿಯ ಮೊಹರು

ಸಹಿ
ಮುಖ್ಯೋಪಾಧ್ಯಾಯರ ಸಹಿ
ಮತ್ತು ಸಂಸ್ಥೆಯ ಮೊಹರು

ಸ್ಥಳ :
ದಿನಾಂಕ :

**ಅನುಬಂಧ–ಇ**

**ಕನ್ನಡ ಮಾಧ್ಯಮ ವ್ಯಾಸಂಗ ಪ್ರಮಾಣ ಪತ್ರ**

ಶ್ರೀ/ಶ್ರೀಮತಿ...........................................................ರವರ ಮಗ/ಮಗಳು/ಪತಿ/ಪತ್ನಿ/ಶ್ರೀಮತಿ/ಕುಮಾರಿ ........................................................................ ಜಿಲ್ಲೆ ...........................................ತಾಲ್ಲೂಕು ................................................ಗ್ರಾಮದಲ್ಲಿ ವಾಸವಾಗಿರುವ ಇವರು .........................ನೇ ತರಗತಿಂದ ........................................ನೇ ತರಗತಿಯವರೆಗೆ ..................................... ಶೈಕ್ಷಣಿಕ ವರ್ಷದಿಂದ ........................... ಶೈಕ್ಷಣಿಕ ವರ್ಷದವರೆಗೆ ..................................ಶಾಲೆಯಲ್ಲಿ ಕನ್ನಡ ಮಾಧ್ಯಮದಲ್ಲಿ ವ್ಯಾಸಂಗ ಮಾಡಿರುತ್ತಾರೆಂದು ಪ್ರಮಾಣಿಕರಿಸಲಾಗಿದೆ.

ಸ್ಥಳ:

ದಿನಾಂಕ: ಮುಖ್ಯೋಪಾಧ್ಯಾಯರ ಸಹಿ ಮತ್ತು ಸಂಸ್ಥೆಯ ಮೊಹರು

**ಅನುಬಂಧ–ಈ**

GOVERNMENT OF KARNATAKA

DEPARTMENT OF SAINIK WELFARE AND RESETTLEMENT

Office of the Deputy Director
Department of Sainik Welfare & Resettlement
(Karnataka)

No. Date:

CERTIFICATE

This is to certify that Shri/Smt/Kum..................................................is an applicant for ...............................in Karnataka is the spouse/son/daughter of No.....................Rank.......... Name ......................................................who died/was permanently disabled while in service according to the certificate issued by Defence Authority. He died/was permanently disabled on....................

Home address of the individual at the time of joining Defense Service as per the records is:

..................................................................
....................................................................

Place: Signature of the Deputy Director
Date: Department of Sainik Welfare & Resettlement
District ....................................

**ಅನುಬಂಧ–ಉ**

<u>ಸರ್ಕಾರದ ಸುತ್ತೋಲೆ ಸಂಖ್ಯೆ:ಸಿಆಸುಇ **44** ಸೇನೆನಿ **2001** ದಿನಾಂಕ:**27.07.2001**</u>

<u>ನಮೂನೆ-**3**</u>

<u>ಯೋಜನೆಗಳಿಂದ ನಿರ್ವಸಿತರಾದ ಕುಟುಂಬದ ಅಭ್ಯರ್ಥಿ</u>

ಶ್ರೀ/ಶ್ರೀಮತಿ..............................................................ಎಂಬುವವರ ಮಗ/ ಮಗಳು/ ಪತಿ/ ಪತ್ನಿ ಶ್ರೀ/ಶ್ರೀಮತಿ/ಕುಮಾರಿ.............................ಜಿಲ್ಲೆ....................ತಾಲ್ಲೂಕು......................ಗ್ರಾಮದಲ್ಲಿ ..........................ವಾಸವಾಗಿರುವ ಇವರು: ಇವರ ಕುಟುಂಬದವರ ಅವಲಂಬಿತರಾಗಿದ್ದ ಈ ಕೆಳಕಂಡ ಆಸ್ತಿಯನ್ನು .................. ಯೋಜನೆಗಾಗಿ .....................................ಇಸವಿಯಲ್ಲಿ ಸ್ವಾಧೀನಪಡಿಸಿಕೊಳ್ಳಲಾಗಿದೆ ಎಂದು ಈ ಮೂಲಕ ಪ್ರಮಾಣೀಕರಿಸಿದೆ.

(ಅ) * * ವಾಸಿಸುವ ಮನೆ ಮತ್ತು ತಾವು ಅವಲಂಬಿತರಾಗಿದ್ದ ಅವರ ಕೃಷಿ ಭೂಮಿಯ ಅರ್ಧದಷ್ಟು

(ಆ) * * ಯೋಜನೆಗೆ ಮೊದಲು ಭೂಮಿಯನ್ನು ಹೊಂದಿರದೆ: ಯೋಜನೆಯಿಂದ ತಾವು ವಾಸಿಸುವ ಮನೆ:

(ಇ) * * ತಾವು ಅವಲಂಬಿತರಾಗಿದ್ದ ತಮ್ಮ ಕೃಷಿ ಭೂಮಿಯ ಅರ್ಧದಷ್ಟು ಅಥವಾ ಅದಕ್ಕಿಂತ ಕಡಿಮೆ ಕೃಷಿ ಭೂಮಿ:

(ಈ) * * ಇತರ ಇನ್ನಾವುದೇ ಪ್ರಕರಣದಲ್ಲಿ ಯೋಜನೆಯಿಂದ ನಿರ್ವಸಿತರಾದವರು.

ಸ್ಥಳ : ತಹಶೀಲ್ದಾರ್

ದಿನಾಂಕ ತಾಲ್ಲೂಕು/ಕಛೇರಿಯ ಮೊಹರು

**ಅನುಬಂಧ–ಊ**

# ನಿರಾಕ್ಷೇಪಣಾ ಪ್ರಮಾಣ ಪತ್ರ

ನಮೂನೆ

**(ಇಲಾಖಾ ಅಭ್ಯರ್ಥಿಗಳಿಗೆ ಆಂತರಿಕೆ ನೇಮಕಾತಿಗೆ ಮಾತ್ರ)**

______________________________________ಸಂಸ್ಥೆಯ _________________ವಿಭಾಗ/ವಿಭಾಗೀಯ/ ಕೇಂದ್ರ ಕಛೇರಿಯ________________ಶಾಖೆ/ಇಲಾಖೆಯಲ್ಲಿ/ ___________ಘಟಕದಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಶ್ರೀ/ಶ್ರೀಮತಿ……………………………………………………………, ಹುದ್ದೆ...................... ಬಿಲ್ಲೆ ಸಂಖ್ಯೆ.......................... ರವರು ದಿನಾಂಕ: ................................ ರಿಂದ ಸಂಸ್ಥೆಯಲ್ಲಿ ಪರೀಕ್ಷಣಾರ್ಥ ಸೇವೆಯ ಮೇಲೆ ಕರ್ತವ್ಯ ನಿರ್ವಹಿಸುತ್ತಿದ್ದು, ಸದರಿಯವರು ಬೆಂಗಳೂರು ಮಹಾನಗರ ಸಾರಿಗೆ ಸಂಸ್ಥೆಯಲ್ಲಿ ಕರೆದಿರುವ _______________ಹುದ್ದೆಗೆ (ಆಂತರಿಕ ನೇಮಕಾತಿ)ಗಳಿಗೆ ಅರ್ಜಿಯನ್ನು ಸಲ್ಲಿಸಲು ನಿರಾಕ್ಷೇಪಣಾ ಪತ್ರವನ್ನು ನೀಡುವಂತೆ ಕೋರಿರುತ್ತಾರೆ.

ಸದರಿಯವರಿಗೆ ಬೆಂಗಳೂರು ಮಹಾನಗರ ಸಾರಿಗೆ ಸಂಸ್ಥೆಯಲ್ಲಿ ಕರೆದಿರುವ ________________ಹುದ್ದೆಗೆ ಅರ್ಜಿಯನ್ನು ಸಲ್ಲಿಸಲು ಸಂಸ್ಥೆಯ ವತಿಯಿಂದ ಯಾವುದೇ ಆಕ್ಷೇಪಣೆ ಇರುವುದಿಲ್ಲವೆಂದು ಈ ಮೂಲಕ ತಿಳಿಸಲಾಗಿದೆ.

ಸ್ಥಳ : ಇಲಾಖಾ ಮುಖ್ಯಸ್ಥರು/ವಿಭಾಗೀಯ ನಿಯಂತ್ರಣಾಧಿಕಾರಿ

ದಿನಾಂಕ _______ಸಂಸ್ಥೆ, ಇಲಾಖೆ / ವಿಭಾಗ

ANNEXURE-A

## ELIGIBILITY CERTIFICATE

[Under Article 371(J)]
(see rule 3(3))

[The Karnataka Public Employment (Reservation in Appointment for Hyderabad-Karnataka Region) Rules for Issual of Certificates, 2013]

Sri/Smt .......................... s/o/w/o ............................... is a Local Person of the Village/Town ............................ of Taluka .................................... of District ......................... of Karnataka State.

Place: ......................

Date : ......................

Name ......................................

Assistant Commissioner

............................ Sub Division

............................ District

ಅನುಬಂಧ–ಖ–1

**ANNEXURE-B**

## RESIDENCE CERTIFICATE

[Under Article 371(J)]
(see rule 4(b)(2)(iii))

[The Karnataka Public Employment (Reservation in Appointment for Hyderabad-Karnataka Region) Rules for Issual of Certificates, 2013]

This is to certify that Sri/Smt ........................ s/o/w/o ............................... has been residing at the following address in Village/Town .................... of ....................... Taluka of ..................... District during the period noted below:

| S.No. | Address | From which date to which date | Evidence Summary (attach all certified copies of the evidence relied on) |
|---|---|---|---|
| 1 | | | |
| 2 | | | |
| 3 | | | |
| 4 | | | |
| 5 | | | |
| 6 | | | |

Tabulate all enclosures adduced in evidence

Place: ......................
Date : ......................

Name ......................................
Tahsildar
............................ Taluka




**Friends please Join Our Whastapp Group For Getting Latest Govt, Private Abroad Jobs & Others**